# ಬೆಳಗಾವಿ ವಾರ್ತೆ

ಕನ್ನಡ ದಿನ ಪತ್ರಿಕೆ, ಬೆಳಗಾವಿ

ಸಂಪಾದಕರು: ಮಹೇಶ್ವರಿ ಭೀಮಶಿ ಭರಮಣ್ಣವರ
EDITOR: MAHESHWARI BHIMASHI BHARAMANNAVARA

BELAGAVI VARTE
KANNADA DAILY MORNING BELAGAVI

G-mail: belagavivarte1@gmail.com
epaper. belagavivarte.com
Regd No : G2/PMG/KA/NK/BM/157/26-28

Volume: 01 | Issue : 88 | WEDNESDAY 10-06-2026 | PRGI No : KNKAN/26/A0962 | Pages:4 | Rs.2.00 | M: 9742418836


## 'ದೇವೇಗೌಡರನ್ನು ರಾಜಕೀಯ ಜೀವನದುದ್ದಕ್ಕೂ ಕಾಡಿದ್ದು ಕಾಂಗ್ರೆಸ್; ಅವರ ವಿಚಾರವಾಗಿ ಮೊಸಳೆ ಕಣ್ಣೀರು ಸುರಿಸುವ ಅಗತ್ಯವಿಲ್ಲ'



ಬೆಂಗಳೂರು: ದೇಶದ ಪ್ರಧಾನ ಮಂತ್ರಿ ಸ್ಥಾನವನ್ನು ಅಲಂಕರಿಸಿದ್ದ ಹೆಮ್ಮೆಯ ಕನ್ನಡಿಗ ಎಂದು ಎನಿಸಿಕೊಂಡಿದ್ದ ದೇವೇಗೌಡರ ಕುರಿತು ಕರ್ನಾಟಕದ ಕಾಂಗ್ರೆಸ್ ಪಕ್ಷದ ಉಸ್ತುವಾರಿ ರಣದೀಪ್ ಸುರ್ಜೇವಾಲಾ ಮತ್ತು ಕೆಪಿಸಿಸಿ ಅಧ್ಯಕ್ಷ ಬಿ.ಕೆ ಹರಿಪ್ರಸಾದ್ ಅವರು ಮೊಸಳೆ ಕಣ್ಣೀರು ಸುರಿಸುವ ಅವಶ್ಯಕತೆ ಇಲ್ಲ ಎಂದು ಬಿಜೆಪಿ ರಾಜ್ಯ ಘಟಕದ ಅಧ್ಯಕ್ಷ ಬಿ.ವೈ. ವಿಜಯೇಂದ್ರ ಹೇಳಿದ್ದಾರೆ.

ಈ ಸಂಬಂಧ ತಮ್ಮ ಎಕ್ಸ್ ಖಾತೆಯಲ್ಲಿ ಬರೆದುಕೊಂಡಿರುವ ಅವರು, ದೇವೇಗೌಡರನ್ನು ಪ್ರಧಾನಿ ಪದವಿಯಿಂದ ಕೆಳಗಿಳಿಸಿದ ಕುಖ್ಯಾತಿ ಕಾಂಗ್ರೆಸ್ ಪಕ್ಷದ ಮೇಲಿರುವುದನ್ನು ಕಾಂಗ್ರೆಸ್ ಮುಂದಾಳುಗಳು ಮರೆತಂತಿದೆ. ಮಾನ್ಯ ದೇವೇಗೌಡರನ್ನು ರಾಜಕೀಯ ಜೀವನದುದ್ದಕ್ಕೂ ಕಾಡಿದ್ದು, ಅವರ ಪಕ್ಷವನ್ನು ಇಬ್ಭಾಗ ಮಾಡಲು ಯತ್ನಿಸಿದ್ದು ಕಾಂಗ್ರೆಸ್.

ಇಷ್ಟಾಗಿಯೂ ಕೊಳಕು ರಾಜಕಾರಣ ಮಾಡುವುದನ್ನು ನಿಲ್ಲಿಸದ ಕಾಂಗ್ರೆಸ್ಸಿಗರು, ದೇವೇಗೌಡರ ಕುರಿತು ಕೃತಕ ಕಾಳಜಿಯ ಮಾತನಾಡುತ್ತಿರುವ ಪರಿ ಹಾಸ್ಯಾಸ್ಪದವಾಗಿದೆ.

ಭಾರತೀಯ ಜನತಾ ಪಾರ್ಟಿಯು ಸನ್ಮಾನ್ಯ ದೇವೇಗೌಡ ಅವರನ್ನು ಅತ್ಯಂತ ಗೌರವದಿಂದ ನಡೆಸಿಕೊಂಡಿದೆ. ಭಾರತದ ಸಮಗ್ರತೆ ಉಳಿಯಬೇಕಾದರೆ, ಅಭಿವೃದ್ಧಿ ಹೊಂದಬೇಕಾದರೆ ಅದು ಪ್ರಧಾನಿ ನರೇಂದ್ರ ಮೋದಿ ಜೀ ಅವರ ಆಡಳಿತದಿಂದ ಮಾತ್ರ ಸಾಧ್ಯ ಎಂಬ ನಂಬಿಕೆಯಿಂದ ದೇವೇಗೌಡ ಅವರು ಭಾರತೀಯ ಜನತಾ ಪಾರ್ಟಿಯನ್ನು ಬೆಂಬಲಿಸಿ, ಎನ್ ಡಿಗೆ ತಮ್ಮ ಜೆಡಿಎಸ್ ಪಕ್ಷವನ್ನು ಸೇರಿಸಿದ್ದಾರೆ.

ಇದನ್ನು ಕಂಡು ಸಹಿಸಲಾಗದ ಸ್ಥಿತಿಯಲ್ಲಿರುವ ಕಾಂಗ್ರೆಸ್ಸಿಗರು ದೇವೇಗೌಡರ ಹೆಸರನ್ನು ಬಳಸಿಕೊಂಡು ರಾಜಕಾರಣ ಮಾಡಲು ಹೊರಟಿರುವುದು ನಾಚಿಗೆಗೇಡಿತನದ ಪರಮಾವಧಿಯಾಗಿದೆ.

ಅವರ ಹಿರಿತನ, ಸೇವೆ ಉಲ್ಲೇಕಿಸಿ ಸಂಸತ್ತಿನಲ್ಲಿ ಸ್ವತಃ ಪ್ರಧಾನ ಮಂತ್ರಿಗಳೇ ಭಾವುಕವಾಗಿ ಮಾತನಾಡಿ ಅವರ ಕೊಡುಗೆ, ಸಾಧನೆಯನ್ನು ಮುಕ್ತ ಕಂಠದಿಂದ ಪ್ರಶಂಸಿಸಿದ್ದಾರೆ. ರಾಷ್ಟವನ್ನು ಮುನ್ನಡೆಸುವ ನಿಟ್ಟಿನಲ್ಲಿ ಅವರ ಮಾರ್ಗದರ್ಶನ ಸದಾ ನಮಗೆ ಬೇಕೆಂದು ಹೇಳಿದ್ದಾರೆ. ಈ

ನಿಟ್ಟಿನಲ್ಲಿ ಅತ್ಯುತ್ತಮ ರಾಜಕೀಯ ಹಾಗೂ ವ್ಯಕ್ತಿಗತ ಗೌರವಗಳ ಬಾಂಧವ್ಯವಿರುವ ದೇವೇಗೌಡರೊಂದಿಗಿನ ಸಂಬಂಧಕ್ಕೆ ಹುಳಿ ಹಿಂಡುವ ಮಾತುಗಳು 'ಕಾಂಗ್ರೆಸ್ಸಿಗರ ವಿಕೃತ ನಡೆ' ಎನ್ನುವದನ್ನು ಕರ್ನಾಟಕದ ಜನತೆ ಅರ್ಥೈಸಿಕೊಳ್ಳದಷ್ಟು ಮುಗ್ಧರಲ್ಲ ಎನ್ನುವ ತಿಳುವಳಿಕೆ ಕಾಂಗ್ರೆಸ್ಸಿಗರಿಗಿರಲಿ ಎಂದು ವಿಜಯೇಂದ್ರ ಕಿಡಿ ಕಾರಿದ್ದಾರೆ.

## ಚದುರಂಗದ ಆಟದಲ್ಲಿ ಯಾವ ಕಾಯಿ ಮುನ್ನಡೆಸುತ್ತೇವೆ ಎಂದು ಯಾರೂ ಹೇಳುವುದಿಲ್ಲ: ಸಿಎಂ ಡಿ.ಕೆ ಶಿವಕುಮಾರ್



ಬೆಂಗಳೂರು: ರಾಜಕಾರಣದಲ್ಲಿ ಚದುರಂಗದ ಆಟ ಆಡುವಾಗ ಯಾರಾದರು ಯಾವ ರೀತಿ ಕಾಯಿ ನಡೆಸುತ್ತಾರೆ ಎಂದು ಹೇಳುತ್ತಾರೆಯೇ? ಯಾರು ಹೇಳುವುದಿಲ್ಲ ಎಂದು ಸಿಎಂ ಡಿ.ಕೆ. ಶಿವಕುಮಾರ್ ಹೇಳಿದರು.

ವಿಧಾನಸೌಧದಲ್ಲಿ ಮಾಧ್ಯಮಗಳ ಪ್ರಶ್ನೆಗಳಿಗೆ ಸೋಮವಾರ ಪ್ರತಿಕ್ರಿಯೆ ನೀಡಿದರು. ಪರಿಷತ್ ಚುನಾವಣೆಯಲ್ಲಿ ವಿನಯ್ ಕಾರ್ತಿಕ್ ಸ್ಪರ್ಧೆ, ಜೆಡಿಎಸ್ ಹೆಚ್ಚುವರಿ ಅಭ್ಯರ್ಥಿ ಸ್ಪರ್ಧೆ ಬಗ್ಗೆ ಪ್ರತಿಕ್ರಿಯೆ ನೀಡಿದರು.

ದೇವೇಗೌಡರಿಗೆ ರಾಜ್ಯಸಭೆ ಟಿಕೆಟ್ ತಪ್ಪಿಸಿ ಬಿಜೆಪಿ ಅನ್ಯಾಯ ಮಾಡಿದೆ ಎಂದು ಸುರ್ಜೇವಾಲ ಅವರು ಟೀಕೆ ಮಾಡಿರುವ ಬಗ್ಗೆ ಕೇಳಿದಾಗ, "ನಾನು ಸದ್ಯಕ್ಕೆ ಏನು ಮಾತನಾಡುವುದಿಲ್ಲ. ಅವರು ಮಾತಾಡಿದ್ದಾರೆ ಅಂತ ನಾನು ಮಾತನಾಡಲು ಹೋಗುವುದಿಲ್ಲ. ನಮ್ಮ ಪಕ್ಷದ ಚಿಂತನೆ ಯನ್ನು ನಾನು ಪಾಲನೆ ಮಾಡುತ್ತೇನೆ" ಎಂದರು.

ಸೂರಜ್ ಹೆಗ್ಡೆ ಆತ್ಮೀಯ ಸ್ನೇಹಿತ. ತ್ಯಾಗಕ್ಕೆ ಹೆಸರಾದವರು. ಇದೇ ಸ್ಥಾನ ಬೇಕು ಎಂದೂ ಕೇಳುತ್ತಿರಲಿಲ್ಲ. ನಾನು ಹಿಂದೆ ಅವರಿಗೆ ಮೈಸೂರು ಸಂಸದ ಸ್ಥಾನಕ್ಕೆ ಟಿಕೆಟ್ ಕೊಡಿಸಬೇಕು ಅಂತ ಬಹಳ ಹೋರಾಟ ಮಾಡಿದ್ದೆ. ಅವರು ದೇವರಾಜ ಅರಸು ಅವರ ಮೊಮ್ಮಗ. ಪಕ್ಷದ ನಿಷ್ಠಾವಂತ ಕಾರ್ಯಕರ್ತ. ನನ್ನ ಜೊತೆ ಪದಾಧಿಕಾರಿಯಾಗಿದ್ದವರು.

ಗ್ಯಾರಂಟಿ ಸಮಿತಿ ಉಪಾಧ್ಯಕ್ಷರಾಗಿದ್ದವರು. ನಮ್ಮ ಸರ್ಕಾರ ರಾಜ್ಯ ಮಟ್ಟದ ಸಚಿವ ಸ್ಥಾನ ಕೊಟ್ಟಿತ್ತು. ಅವರ ಮೇಲೆ ನಾನು ದೊಡ್ಡ ಆಕಾಂಕ್ಷೆ ಇಟ್ಟುಕೊಂಡಿದ್ದೆ. ಪಕ್ಷ ಅವರ ಮೇಲೆ ಅವಲಂಬಿಸಿತ್ತು ಎಂದು ತಿಳಿಸಿದರು.

ನಿಷ್ಠಾವಂತ ಕಾರ್ಯಕರ್ತ ಪಕ್ಷಕ್ಕೆ ಸಿಗುವುದು ಬಹಳ ವಿಶೇಷ. ಈಗಲೂ ಕೂಡ ಅನೇಕ ವಿಚಾರಗಳನ್ನು ಅವರ ವಿಷಯದಲ್ಲಿ ಚಿಂತಿಸಲಾಗಿತ್ತು. ಎಐಸಿಸಿ ನಮ್ಮ ಕಾರ್ಯದರ್ಶಿಗಳಾಗಿ, ನಮ್ಮ ರಾಜ್ಯ ಮಟ್ಟದ ಪದಾಧಿಕಾರಿಗಳಾಗಿ ಕೆಲಸ ಮಾಡುತ್ತಿದ್ದರು" ಎಂದರು.

"ಅವರ ಕುಟುಂಬದ ದುಃಖ ನೋಡಲು ಆಗುತ್ತಿಲ್ಲ. ಅವರ ತಂದೆ ಕೂಡ ಒಬ್ಬ ಹಿರಿಯ ದೊಡ್ಡ ರಾಜಕಾರಣಿ. ವೈಯಕ್ತಿಕವಾಗಿ ನಮ್ಮೆಲ್ಲರಿಗೂ ಕೂಡ ಬಹಳ ದುಃಖ ಉಂಟಾಗಿದೆ. ಪಕ್ಷದ ಹಾಗೂ ಸರ್ಕಾರದ ಪರವಾಗಿ ಗೌರವ ನಮನ ಸಲ್ಲಿಸುತ್ತೇನೆ. ಕರ್ನಾಟಕ ಸರ್ಕಾರ ಅವರಿಗೆ ಸರ್ಕಾರಿ ಗೌರವದೊಂದಿಗೆ ಅಂತಿಮ ನಮನ ಸಲ್ಲಿಸಲಾಗುವುದು.

ಅವರ ಕುಟುಂಬದವರು ಅಂತಿಮ ಕಾರ್ಯ ಯಾವಾಗ ತೀರ್ಮಾನ ಮಾಡುತ್ತಾರೋ ಆಗ ಗೌರವವನ್ನು ಕೊಡುತ್ತೇವೆ. ಈ ವಿಚಾರವಾಗಿ ನಾನು ಈಗಾಗಲೇ ಮುಖ್ಯ ಕಾರ್ಯದರ್ಶಿಗಳಿಗೆ ಆದೇಶ ತಿಳಿಸಿದ್ದೇನೆ. ಅವರ ಅಂತ್ಯಕ್ರಿಯೆಯಲ್ಲಿ ನಾನು ಕೂಡ ಭಾಗಿಯಾಗುತ್ತೇನೆ ಎಂದರು.

## ಹಣಕಾಸಿನ ವ್ಯವಹಾರ ವಿವಾದ ರಕ್ತಪಾತಕ್ಕೆ ತಿರುಗಿತು: ಗೋಕಾಕ್‌ನಲ್ಲಿ ಯುವಕ ಗಂಭೀರ ಗಾಯ



**ಬೆಳಗಾವಿ ವಾರ್ತೆ ಗೋಕಾಕ್:** ಹಣಕಾಸಿನ ವ್ಯವಹಾರಕ್ಕೆ ಸಂಬಂಧಿಸಿದ ವಿವಾದ ಎರಡು ಗುಂಪುಗಳ ನಡುವಿನ ಘರ್ಷಣೆಗೆ ತಿರುಗಿ, ಒಬ್ಬ ಯುವಕ ಗಂಭೀರವಾಗಿ ಗಾಯ ಗೊಂಡ ಘಟನೆ ಸೋಮವಾರ ಸಂಜೆ ಬೆಳಗಾವಿ ಜಿಲ್ಲೆಯ ಗೋಕಾಕ್ ನಗರದ ಲಕ್ಷ್ಮೀ ಬಡಾವಣೆಯ ಇಂಡಸ್ಟ್ರಿಯಲ್ ಎಸ್ಟೇಟ್ ಪ್ರದೇಶದಲ್ಲಿ ನಡೆದಿದೆ.

ಘಟನೆಯಲ್ಲಿ ವರುಣ ಸಂತೋಷ್ ಗೊಲ್ಲರ್ (16) ಎಂಬ ಯುವಕ ಮಾರಕಾಸ್ತ್ರಗಳಿಂದ ನಡೆದ ಹಲ್ಲೆಯಲ್ಲಿ ಗಂಭೀರವಾಗಿ ಗಾಯಗೊಂಡಿದ್ದು, ಪ್ರಾಥಮಿಕ ಚಿಕಿತ್ಸೆ ಬಳಿಕ ಹೆಚ್ಚಿನ ಚಿಕಿತ್ಸೆಗೆ ಬೆಳಗಾವಿಯ ಖಾಸಗಿ ಆಸ್ಪತ್ರೆಗೆ ದಾಖಲಿಸಲಾಗಿದೆ. ವೈದ್ಯರು ಆತನ ಆರೋಗ್ಯದ ಮೇಲೆ ನಿಗಾ ವಹಿಸಿದ್ದು, ಸ್ಥಿತಿ ಚಿಂತಾಜನಕವಾಗಿದೆ ಎಂದು ತಿಳಿದುಬಂದಿದೆ.

ಪೊಲೀಸ್ ಮೂಲಗಳ ಪ್ರಕಾರ, ಹಣಕಾಸಿನ ವ್ಯವಹಾರಕ್ಕೆ ಸಂಬಂಧಿಸಿದ ಹಳೆಯ ವೈಮನಸ್ಸು ಮತ್ತು ಹಣದ ವಿಚಾರದಲ್ಲಿ ಉಂಟಾದ ಭಿನ್ನಾಭಿಪ್ರಾಯವೇ ಗಲಾಟೆಗೆ ಕಾರಣವಾಗಿದೆ ಎನ್ನಲಾಗಿದೆ. ಮಾತಿನ ಚಕಮಕಿಯಾಗಿ ಆರಂಭವಾದ ವಿವಾದ ಕೆಲವೇ ಕ್ಷಣಗಳಲ್ಲಿ ಹಿಂಸಾತ್ಮಕ ಸ್ವರೂಪ ಪಡೆದುಕೊಂಡಿದ್ದು, ಎರಡೂ ಗುಂಪಿ ನವರು ಪರಸ್ಪರ ದಾಳಿ ನಡೆಸಿದ್ದಾರೆ. ಘರ್ಷಣೆಯ ವೇಳೆ ಕಲ್ಲುತೂರಾಟವೂ ನಡೆದಿದ್ದು, ಒಂದು ಕಾರು, ಒಂದು ಬುಲೆರೋ ವಾಹನ ಹಾಗೂ ಸಮೀಪದ ಮನೆಯ ಕಿಟಕಿ ಗಾಜುಗಳು ಜಖಂ ಗೊಂಡಿವೆ. ಘಟನೆಯಿಂದ ಕೆಲಕಾಲ ಪ್ರದೇಶದಲ್ಲಿ ಉದ್ವಿಗ್ನ ವಾತಾವರಣ ನಿರ್ಮಾಣವಾಗಿತ್ತು. ಮಾಹಿತಿ ತಿಳಿದ ತಕ್ಷಣ ಸ್ಥಳಕ್ಕೆ ಧಾವಿಸಿದ ಗೋಕಾಕ್ ನಗರ ಪೊಲೀಸ್ ಠಾಣೆಯ ಸಿಬ್ಬಂದಿ ಪರಿಸ್ಥಿತಿ ಯನ್ನು ನಿಯಂತ್ರಣಕ್ಕೆ ತಂದಿದ್ದಾರೆ. ಘಟನೆ ಯ ಸಂಬಂಧ ಅಪ್ಪಾಸಾಹೇಬ್ ಭಜಂತ್ರಿ ಕುಟುಂಬದ ಸದಸ್ಯರ ವಿರುದ್ಧ ಪ್ರಕರಣ ದಾಖಲಿಸಿಕೊಂಡು ತನಿಖೆ ಕೈಗೊಳ್ಳಲಾಗಿದೆ.

ಗಾಯಗೊಂಡ ವರುಣನ ಸಂಬಂಧಿಕರು ಘಟನೆಯ ಬಗ್ಗೆ ಆಕ್ರೋಶ ವ್ಯಕ್ತಪಡಿಸಿ ನಗರ ಪೊಲೀಸ್ ಠಾಣೆ ಎದುರು ಜಮಾಯಿಸಿ ಆರೋಪಿಗಳ ವಿರುದ್ಧ ಕಠಿಣ ಕ್ರಮಕ್ಕೆ ಆಗ್ರಹಿಸಿದರು. ಪರಿಸ್ಥಿತಿ ಮತ್ತಷ್ಟು ಉದ್ವಿಗ್ನಗೊಳ್ಳದಂತೆ ಪೊಲೀಸ್ ಇಲಾಖೆ ಹೆಚ್ಚುವರಿ ಭದ್ರತೆ ಒದಗಿಸಿದೆ. ಈ ಕುರಿತು ಗೋಕಾಕ್ ನಗರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಘಟನೆಯ ನಿಖರ ಕಾರಣ, ದಾಳಿಯಲ್ಲಿ ಭಾಗಿಯಾದವರ ಸಂಖ್ಯೆ ಹಾಗೂ ಬಳಸಲಾದ ಮಾರಕಾಸ್ತ್ರಗಳ ಕುರಿತು ಪೊಲೀಸರು ತನಿಖೆ ಮುಂದುವರಿಸಿದ್ದಾರೆ.

## ಸತೀಶ್ ಜಾರಕಿಹೊಳಿ ನೇತೃತ್ವದಲ್ಲಿ ಜಿಲ್ಲೆಯಲ್ಲಿ ಅಭಿವೃದ್ಧಿ ಕಾಮಗಾರಿಗಳ ಅನುಷ್ಠಾನ: ಸಂಸದೆ ಪ್ರಿಯಾಂಕಾ ಜಾರಕಿಹೊಳಿ



**ಬೆಳಗಾವಿ ವಾರ್ತೆ ಮೋಳೆ:** ರಾಜ್ಯದಲ್ಲಿ ಅನೇಕ ಬಾರಿ ರಾಜ್ಯ ಸಚಿವ ಸಂಪುಟದಲ್ಲಿ ಸಚಿವರಾಗಿ ಜನಮನ್ನಣೆ ಗಳಿಸಿರುವ ನಮ್ಮ ತಂದೆ ಸತೀಶ್ ಜಾರಕಿಹೊಳಿ ನೇತೃತ್ವದಲ್ಲಿ ಜನಪರ ಮತ್ತು ಅಭಿವೃದ್ಧಿಪರ ಕಾರ್ಯಗಳನ್ನು ನಾನು ನನ್ನ ಕ್ಷೇತ್ರದಲ್ಲಿ ಅನುಷ್ಠಾನಗೊಳಿಸುತ್ತಿರುವೆ ಎಂದು ಚಿಕ್ಕೋಡಿ ಸಂಸದೆ ಪ್ರಿಯಾಂಕಾ ಜಾರಕಿಹೊಳಿ ಹೇಳಿದರು.

ಅವರು ಹುಲಗಬಾಳಿ ಗ್ರಾಮದಲ್ಲಿ ಸಿಸಿ ರಸ್ತೆಗೆ ಭೂಮಿ ಪೂಜೆ ನೆರವೇರಿಸಿ ಮಾತನಾಡುತ್ತಿದ್ದರು. ಗ್ರಾಮೀಣ ಭಾಗದ ಜನರು ತಮಗೆ ಅವಶ್ಯವಿರುವ ರಸ್ತೆ ಕುಡಿಯುವ ನೀರು ಶೌಚಾಲಯ ವಿದ್ಯುತ್ ದೀಪ ಸೇರಿದಂತೆ ಯಾವುದೇ ಮೂಲಭೂತ ಸೌಕರ್ಯಗಳು ಬೇಕಾಗಿದ್ದಲ್ಲಿ ನೇರವಾಗಿ ನನ್ನನ್ನು ಸಂಪರ್ಕಿಸಿ ಎಂದವರು ಸುಮಾರು ಮೂರು ದಶಕಗಳಿಂದ ರಾಜಕೀಯದಲ್ಲಿದ್ದು ಜನರ ಸೇವೆ ಮಾಡುತ್ತಿರುವ ಸಚಿವ ಸತೀಶ್ ಜಾರಕಿಹೊಳಿ ಅತ್ಯಂತ ಜನಮನ್ನಣೆ ಗಳಿಸಿದ ರಾಜಕಾರಣಿ ಆಗಿದ್ದಾರೆ ಎಂದು ಸಂಸದೆ ಹೇಳಿದರು. ರಾಜ್ಯದ ನೂತನ ಮುಖ್ಯಮಂತ್ರಿಯಾಗಿ ಡಿಕೆ ಶಿವಕುಮಾರ್ ಅವರು ಅಧಿಕಾರ ವಹಿಸಿಕೊಂಡಿದ್ದಾರೆ ಅವರ ಆಡಳಿತದಲ್ಲಿ, ಒಳ್ಳೆಯ ಆಡಳಿತ ನೀಡುತ್ತಾರೆ ಇವರ ಸರ್ಕಾರದಲ್ಲಿ ನಮ್ಮ ತಂದೆ ಸತೀಶ್ ಜಾರಕಿಹೊಳಿ ಎರಡನೇ ಅವಧಿಗೆ ಲೋಕೋಪಯೋಗಿ ಸಚಿವರಾಗಿ ಕಾರ್ಯನಿರ್ವಹಿಸುತ್ತಿರುವುದು ಕೂಡ ಜಿಲ್ಲೆಯ ಜನರಿಗೆ ಅನುಕೂಲವಾಗಲಿದೆ ಎಂದರು.

ಇದೇ ಸಂದರ್ಭದಲ್ಲಿ ಹುಲಗಬಾಳಿ ಗ್ರಾಮದ ಗ್ರಾಮಸ್ಥರು ಹುಲಗಬಾಳಿ ಐನಾಪುರ್ ಸಂಪರ್ಕ ರಸ್ತೆ ಸಂಪೂರ್ಣ ಹದಗೆಟ್ಟಿದ್ದು ತಕ್ಷಣ ಸ್ಪಂದಿಸಿ ರಸ್ತೆ ನಿರ್ಮಾಣ ಮಾಡಿಕೊಟ್ಟು ಹುಲಗಬಾಳಿ ಗ್ರಾಮದ ಜನರಿಗೆ ಅನುಕೂಲ ಮಾಡಿಕೊಡಬೇಕೆಂದು ಸಂಸದೆ ಪ್ರಿಯಾಂಕ ಜಾರಕಿಹೊಳಿ ಅವರಲ್ಲಿ ಗ್ರಾಮಸ್ಥರು ಮನವಿ ಮಾಡಿದರು.

ಈ ಸಂದರ್ಭದಲ್ಲಿ ಕಾಂಗ್ರೆಸ್ ಧುರಿಣರಾದ ರಮೇಶ್ ಸಿಂದಗಿ, ಗಜಾನನ ಮಂಗಸೂಳಿ, ರಾವಸಾಹೇಬ್ ಐಹೊಳೆ, ಯುವ ಕಾಂಗ್ರೆಸ್ ಅಧ್ಯಕ್ಷ ತೌಶೀಫ ಸಾಂಗ್ಲಿಕರ, ರಾಜು ಗಡ್ಡೆಕರ, ಸುನಿತಾ ಐಹೊಳೆ, ರೇಖಾ ಪಾಟೀಲ, ಚಿದಾನಂದ ಮುಕಣಿ,ತಮ್ಮಣ್ಣ ಅಡಗಲಿ, ಕಲ್ಲಪ್ಪ ಕಾಂಬಳೆ,ರಮೇಶ್ ಪಾಟೀಲ್, ಅಣ್ಣಾ ಸಾಹೇಬ್ ಧೂಹಿಪುಡೆ, ಸಿದ್ದಪ್ಪ ಕಬ್ಬೂರ್, ಅರುಣ್ ಪಾಟೀಲ್, ಪಾಯಪ್ಪ ತೇರದಾಳ್ ಸೇರಿದಂತೆ ಹುಲಗಬಾಳಿ ಗ್ರಾಮದ ನೂರಾರು ಗ್ರಾಮಸ್ಥರು ಪಾಲ್ಗೊಂಡಿದ್ದರು.

## ವಿಶ್ವಜ್ಯೋತಿ ನರ್ಸಿಂಗ್ ಹೋಮ್‌ನಲ್ಲಿ ಗ್ರಂಥಾಲಯ ಉದ್ಘಾಟನೆ

**ಬೆಳಗಾವಿ ವಾರ್ತೆ ಗೋಕಾಕ:** ಆರೋಗ್ಯ ಜಾಗೃತಿ ಮೂಡಿಸುವುದು ಹಾಗೂ ಓದುವ ಸಂಸ್ಕೃತಿಯನ್ನು ಉತ್ತೇಜಿಸುವ ಉದ್ದೇಶದಿಂದ ವಿಶ್ವಜ್ಯೋತಿ ನರ್ಸಿಂಗ್ ಹೋಮ್‌ನಲ್ಲಿ ಸಿಬ್ಬಂದಿ, ರೋಗಿಗಳು ಹಾಗೂ ಸಂದರ್ಶಕರಿಗಾಗಿ ನೂತನ ಗ್ರಂಥಾಲಯವನ್ನು ಸೋಮವಾರದಂದು ಉದ್ಘಾಟಿಸಲಾಯಿತು.

ಗ್ರಂಥಾಲಯವನ್ನು ಹಿರಿಯ ಸ್ತ್ರೀರೋಗ ತಜ್ಞೆ, ವಿಶ್ವಜ್ಯೋತಿ ನರ್ಸಿಂಗ್ ಹೋಮ್‌ನ ಮೆಡಿಕಲ್ ಡೈರೆಕ್ಟರ್ ಹಾಗೂ ಸ್ವಾಮಿ ಸಂಕಲ್ಪ ಎಜು ಹೆಲ್ತ್ ಫೌಂಡೇಶನ್‌ನ ಸಹ–ಸಂಸ್ಥಾಪಕರಾದ ಡಾ. ಜ್ಯೋತಿ ವಿ. ಸಿಂದೋಳಿಮಠ ಉದ್ಘಾಟಿಸಿದರು. ಈ ಸಂದರ್ಭದಲ್ಲಿ ಆಸ್ಪತ್ರೆಯ ವೈದ್ಯರು, ಶುಶ್ರೂಷಕರು, ಸಿಬ್ಬಂದಿ, ರೋಗಿಗಳು ಹಾಗೂ ಅವರ ಸಂಬಂಧಿಕರು ಉಪಸ್ಥಿತರಿದ್ದರು.

ಗ್ರಂಥಾಲಯದಲ್ಲಿ ಸಾರ್ವಜನಿಕ ಆರೋಗ್ಯ ಜಾಗೃತಿ ಕುರಿತಾದ ಗರ್ಭಿಣಿಯರ ಆರೈಕೆ, ಮಧುಮೇಹ, ರಕ್ತದೊತ್ತಡ, ಕ್ಯಾನ್ಸರ್ ತಡೆಗಟ್ಟುವಿಕೆ, ಪೌಷ್ಟಿಕ ಆಹಾರ ಹಾಗೂ ಮಾನಸಿಕ ಆರೋಗ್ಯಕ್ಕೆ ಸಂಬಂಧಿಸಿದ ಸರಳ ಕನ್ನಡದ ಪುಸ್ತಕಗಳನ್ನು ಅಳವಡಿಸಲಾಗಿದೆ. ಜೊತೆಗೆ ಕನ್ನಡ ಸಾಹಿತ್ಯದ ಕಾದಂಬರಿ, ಕಥಾಸಂಕಲನ, ಕವನ ಸಂಕಲನ ಹಾಗೂ ಮಹನೀಯರ ಜೀವನಚರಿತ್ರೆಗಳ ಸಮೃದ್ಧ ಸಂಗ್ರಹವನ್ನು ಓದುಗರಿಗಾಗಿ ಲಭ್ಯವಾಗುವಂತೆ ಮಾಡಲಾಗಿದೆ.

ಈ ಸಂದರ್ಭದಲ್ಲಿ ಮಾತನಾಡಿದ ಡಾ. ವಿಶ್ವನಾಥ್ ವಿ. ಸಿಂದೋಳಿಮಠ ಅವರು, "ಆಸ್ಪತ್ರೆಯು ದೇಹದ ಆರೋಗ್ಯದ ಜೊತೆಗೆ ಮನಸ್ಸಿನ ಆರೋಗ್ಯಕ್ಕೂ ಪೂರಕವಾಗಿರಬೇಕು. ಗ್ರಂಥಾಲಯವು ಸಿಬ್ಬಂದಿಯ ಜ್ಞಾನ ವೃದ್ಧಿಗೆ ಸಹಕಾರಿಯಾಗುವುದರ ಜೊತೆಗೆ, ಆಸ್ಪತ್ರೆಯಲ್ಲಿ ಕಾಯುವ ಸಮಯವನ್ನು ರೋಗಿಗಳು ಹಾಗೂ ಸಂದರ್ಶಕರು



ಗೋಕಾಕ: ವಿಶ್ವಜ್ಯೋತಿ ನರ್ಸಿಂಗ್ ಹೋಮ್‌ನಲ್ಲಿ ಗ್ರಂಥಾಲಯ ಉದ್ಘಾಟನೆ ಚಿತ್ರ.

ಸದುಪಯೋಗಪಡಿಸಿಕೊಳ್ಳಲು ನೆರವಾಗಲಿದೆ" ಎಂದು ಹೇಳಿದರು.

ಆಸ್ಪತ್ರೆಯ ಆಡಳಿತ ಮಂಡಳಿಯು ಮುಂದಿನ ದಿನಗಳಲ್ಲಿ ಇನ್ನಷ್ಟು ಆರೋಗ್ಯ ಶಿಕ್ಷಣ ಹಾಗೂ ಸಾಹಿತ್ಯ ಕೃತಿಗಳನ್ನು ಗ್ರಂಥಾಲಯಕ್ಕೆ ಸೇರಿಸುವ ಯೋಜನೆ ಹೊಂದಿದ್ದು, ಓದುಗರಿಂದ ಉತ್ತಮ ಸ್ಪಂದನೆ ವ್ಯಕ್ತವಾಗಿದೆ.

## ಅರ್ಜಿ ಆಹ್ವಾನ

**ಬೆಳಗಾವಿ ವಾರ್ತೆ ಗದಗ:** 2026ನೇ ಸಾಲಿನ ಸಮನ್ವಯ ಶಿಕ್ಷಣ ಮಧ್ಯವರ್ತನ ಚಟುವಟಿಕೆಯನ್ನು ಅನುಷ್ಠಾನಗೊಳಿಸಲು ಪೂರ್ವ ಪ್ರಾಥಮಿಕ ಹಾಗೂ 1 ರಿಂದ 5 ನೇ ತರಗತಿಗಳಿಗೆ ಮತ್ತು 6 ರಿಂದ 8ನೇ ತರಗತಿ ಹಾಗೂ 9 ರಿಂದ 12 ನೇ ತರಗತಿಗಳಿಗೆ ಶಿಕ್ಷಕರನ್ನು ತಾತ್ಕಾಲಿಕವಾಗಿ ನೇರ ಗುತ್ತಿಗೆ ಅಡಿಯಲ್ಲಿ ಬಿ.ಅಯ್.ಇ.ಆರ್.ಟಿ ವಿಶೇಷ ಶಿಕ್ಷಕರ ಸೇವೆಗೆ ಅರ್ಹ ಮತ್ತು ಅಸ್ತಕ ಅಭ್ಯರ್ಥಿಗಳಿಗೆ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸಲು ಜೂನ್ 16 ಕೊನೆಯ ದಿನವಾಗಿದೆ.

ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ 9448999340, ಶಾಲಾ ಶಿಕ್ಷಣ ಇಲಾಖೆ ಕಛೇರಿಗೆ ಸಂಪರ್ಕಿಸಬಹುದು ಎಂದು ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮುದ್ರಾ ಸಾಲ, ಕೃಷಿ ಸಾಲ ವಿತರಣೆಗೆ ವೇಗ ನೀಡಿ: ಬ್ಯಾಂಕರ್‌ಗಳಿಗೆ ಬೊಮ್ಮಾಯಿ ನಿರ್ದೇಶನ

## ರೈತರು, ಬಡವರು ಮತ್ತು ಮಹಿಳೆಯರಿಗೆ ಬ್ಯಾಂಕುಗಳು ಹೆಚ್ಚು ನೆರವಾಗಲಿ: ಬಸವರಾಜ ಬೊಮ್ಮಾಯಿ






**ಬೆಳಗಾವಿ ವಾರ್ತೆ ಗದಗ:** ಬ್ಯಾಂಕಿಂಗ್ ಸೇವೆಗಳು ಕೇವಲ ಹಣಕಾಸು ವ್ಯವಹಾರಗಳಿಗೆ ಸೀಮಿತವಾಗದೇ ಸಮಾಜದ ಕಟ್ಟಕಡೆಯ ವ್ಯಕ್ತಿಯ ಆರ್ಥಿಕ ಅಭಿವೃದ್ಧಿಗೆ ನೆರವಾಗಬೇಕು. ರೈತರು, ದಲಿತರು, ಹಿಂದುಳಿದ ವರ್ಗದವರು ಹಾಗೂ ಮಹಿಳೆಯರಿಗೆ ಹೆಚ್ಚಿನ ಪ್ರಮಾಣದಲ್ಲಿ ಸಾಲ ಸೌಲಭ್ಯ ಒದಗಿಸುವ ಮೂಲಕ ಅಭಿವೃದ್ಧಿಗೆ ಕೈಜೋಡಿಸಬೇಕು ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ ಬೊಮ್ಮಾಯಿ ಬ್ಯಾಂಕುಗಳಿಗೆ ಕರೆ ನೀಡಿದರು.

ನಗರದ ಜಿಲ್ಲಾ ಪಂಚಾಯತ್ ಕಾರ್ಯಾಲಯದ ಸಭಾಂಗಣದಲ್ಲಿ ಮಂಗಳವಾರ ನಡೆದ ಜಿಲ್ಲಾ ಮಟ್ಟದ ಬ್ಯಾಂಕುಗಳ ಪ್ರಗತಿ ಪರಿಶೀಲನಾ ಸಭೆ (ಡಿಎಲ್‌ಆರ್‌ಸಿ) ಹಾಗೂ ಜಿಲ್ಲಾ ಮಟ್ಟದ ಬ್ಯಾಂಕುಗಳ ಸಲಹಾ ಸಮಿತಿ (ಡಿಸಿಸಿ) ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಬ್ಯಾಂಕಿಂಗ್ ಜಿಲ್ಲೆಯನ್ನಾಗಿ ರೂಪಿಸುವ ಗುರಿಯೊಂದಿಗೆ ಬ್ಯಾಂಕುಗಳು ಬಡವರು, ರೈತರು, ಮಹಿಳೆಯರು ಹಾಗೂ ಜನಸಾಮಾನ್ಯರ ಆರ್ಥಿಕ ಸಬಲೀಕರಣಕ್ಕೆ ಹೆಚ್ಚಿನ ಆದ್ಯತೆ ನೀಡಬೇಕು ಎಂದು ಅವರು ಅಭಿಪ್ರಾಯಪಟ್ಟರು.

ರೈತರ ಅಭಿವೃದ್ಧಿಯೇ ದೇಶದ ಆರ್ಥಿಕತೆಯ ಮೂಲಾಧಾರವಾಗಿದ್ದು, ಕೃಷಿ ಕ್ಷೇತ್ರಕ್ಕೆ ಹೆಚ್ಚಿನ ಆದ್ಯತೆ ನೀಡುವುದು ಅಗತ್ಯ ಎಂದು ಬೊಮ್ಮಾಯಿ ತಿಳಿಸಿದರು.

ರಾಜ್ಯ ಸರ್ಕಾರ ಶೂನ್ಯ ಬಡ್ಡಿದರದಲ್ಲಿ ಬೆಳೆಸಾಲ ನೀಡುತ್ತಿದ್ದರೂ ಎಲ್ಲ ರೈತರಿಗೆ ಅದರ ಸೌಲಭ್ಯ ದೊರೆಯುವುದಿಲ್ಲ. ಹೀಗಾಗಿ ರಾಷ್ಟ್ರೀಕೃತ ಬ್ಯಾಂಕುಗಳು ಹೆಚ್ಚಿನ ಪ್ರಮಾಣದಲ್ಲಿ ಕೃಷಿ ಸಾಲ ವಿತರಿಸಿ ರೈತರನ್ನು ಬೆಂಬಲಿಸಬೇಕು ಎಂದು ಸೂಚಿಸಿದರು.

ಕೃಷಿ ಕ್ಷೇತ್ರದಲ್ಲಿ ಒಂದು ಶೇಕಡಾ ಅಭಿವೃದ್ಧಿಯಾದರೆ ಉತ್ಪಾದನಾ ಕ್ಷೇತ್ರದಲ್ಲಿ ನಾಲ್ಕು ಶೇಕಡಾ ಮತ್ತು ಸೇವಾ ಕ್ಷೇತ್ರದಲ್ಲಿ ಹತ್ತು ಶೇಕಡಾ ಬೆಳವಣಿಗೆ ಸಾಧ್ಯವಾಗುತ್ತದೆ. ರೈತ ಕೇವಲ ಉತ್ಪಾದಕನಲ್ಲ, ಆತ ದೊಡ್ಡ ಗ್ರಾಹಕನೂ ಆಗಿದ್ದಾನೆ. ರೈತರ ಕೊಳ್ಳುವ ಶಕ್ತಿ ಹೆಚ್ಚಿದಾಗ ಆರ್ಥಿಕ ಚಟುವಟಿಕೆಗಳು ಮತ್ತಷ್ಟು ವಿಸ್ತಾರವಾಗುತ್ತವೆ. ಆದ್ದರಿಂದ ಬ್ಯಾಂಕುಗಳು ರೈತರನ್ನು ತಲುಪಿ ಅಗತ್ಯ ಸಾಲ ಸೌಲಭ್ಯ ಒದಗಿಸಬೇಕು ಎಂದು ಹೇಳಿದರು.

ಸರ್ಕಾರದ ದೃಷ್ಟಿಯಿಂದ ರೈತರು, ದಲಿತರು, ಹಿಂದುಳಿದ ವರ್ಗದವರು ಹಾಗೂ ಆರ್ಥಿಕವಾಗಿ ದುರ್ಬಲ ಸಮುದಾಯಗಳು ಆದ್ಯತೆಯ ವಲಯಗಳಾಗಿದ್ದು, ಬ್ಯಾಂಕುಗಳು ಇವರಿಗೆ ಹೆಚ್ಚಿನ ಪ್ರಮಾಣದಲ್ಲಿ ಸಾಲ ಮತ್ತು ಹಣಕಾಸು ನೆರವು ನೀಡುವ ಮೂಲಕ ಅಭಿವೃದ್ಧಿಗೆ ಕೈಜೋಡಿಸಬೇಕು ಎಂದು ತಿಳಿಸಿದರು.

ಕೇಂದ್ರ ಹಾಗೂ ರಾಜ್ಯ ಸರ್ಕಾರಗಳ ವಿವಿಧ ಯೋಜನೆಗಳನ್ನು ಹೆಚ್ಚಿನ ಸಂಖ್ಯೆಯ ಫಲಾನುಭವಿಗಳಿಗೆ ತಲುಪಿಸುವಲ್ಲಿ ಬ್ಯಾಂಕುಗಳ ಪಾತ್ರ ಮಹತ್ವದ್ದಾಗಿದೆ. ಸ್ವಸಹಾಯ ಸಂಘಗಳು, ಮಹಿಳಾ ಗುಂಪುಗಳು, ಸಣ್ಣ ಕೈಗಾರಿಕೆಗಳು ಹಾಗೂ ಯುವ ಉದ್ಯಮಿಗಳನ್ನು ಗುರುತಿಸಿ ಅವರಿಗೆ ಅಗತ್ಯ ಸಾಲ ಸೌಲಭ್ಯ ಒದಗಿಸಬೇಕು. ಸಣ್ಣ ಕೈಗಾರಿಕೆಗಳ ಅಭಿವೃದ್ಧಿಗೆ ಬ್ಯಾಂಕುಗಳು ಹೆಚ್ಚಿನ ಪ್ರೋತ್ಸಾಹ ನೀಡಬೇಕೆಂದು ಅವರು ಹೇಳಿದರು.

ಗ್ರಾಮೀಣ ಪ್ರದೇಶಗಳಲ್ಲಿ ಬ್ಯಾಂಕಿಂಗ್ ಸೇವೆಗಳ ವಿಸ್ತರಣೆ ಅಗತ್ಯವಾಗಿದ್ದು, ರಾಷ್ಟ್ರೀಕೃತ ಬ್ಯಾಂಕುಗಳು ಹೊಸ ಶಾಖೆಗಳನ್ನು ಆರಂಭಿಸುವ ಮೂಲಕ ಗ್ರಾಮೀಣ ಜನತೆಗೆ ಸುಲಭವಾಗಿ ಸೇವೆ ಒದಗಿಸಬೇಕು. ಜೊತೆಗೆ ಕೇಂದ್ರ ಸರ್ಕಾರದ ಮಹತ್ವಾಕಾಂಕ್ಷಿ ಮುದ್ರಾ ಯೋಜನೆಯಡಿ ಹೆಚ್ಚಿನ ಸಾಲ ವಿತರಣೆ ಮಾಡಿ ಯುವ ಉದ್ಯಮಿಗಳಿಗೆ ಉತ್ತೇಜನ ನೀಡಬೇಕು ಎಂದು ಸಂಸದರು ಸೂಚಿಸಿದರು.

ಬ್ಯಾಂಕುಗಳು ದೇಶದ ಆರ್ಥಿಕತೆ ಬಲವರ್ಧನೆ ನಿರ್ವಹಣೆಯಲ್ಲಿ ಪ್ರಮುಖ ಪಾತ್ರ ವಹಿಸುತ್ತವೆ. ಬ್ಯಾಂಕಿಂಗ್ ವ್ಯವಸ್ಥೆ ಸಮರ್ಥವಾಗಿ ಕಾರ್ಯನಿರ್ವಹಿಸಿದರೆ ಪ್ರಸ್ತುತ ಶೇಕಡಾ ಆರರಿಂದ ಏಳುರಷ್ಟಿರುವ ಬಂಡವಾಳ ಹೂಡಿಕೆಯನ್ನು ಶೇಕಡಾ ಹತ್ತರ ಮಟ್ಟಕ್ಕೆ ಏರಿಸಲು ಸಾಧ್ಯವಾಗುತ್ತದೆ ಎಂದು ಅವರು ಅಭಿಪ್ರಾಯಪಟ್ಟರು.

ಸಭೆಯಲ್ಲಿ ವಿವಿಧ ವಿಷಯಗಳ ಕುರಿತು ಬ್ಯಾಂಕುಗಳಿಗೆ ಹಲವು ನಿರ್ದೇಶನಗಳನ್ನು ನೀಡಿದ ಸಂಸದ ಬೊಮ್ಮಾಯಿ, ಅರ್ಹ ರೈತರಿಗೆ ಬೆಳೆಹಾನಿ ಪರಿಹಾರ ಹಾಗೂ ಸಾಲ ಸೌಲಭ್ಯಗಳು ಸಮರ್ಪಕವಾಗಿ ದೊರೆಯುವಂತೆ ಕ್ರಮ ಕೈಗೊಳ್ಳಬೇಕು ಎಂದರು. ಕೌಶಲ್ಯಾಭಿವೃದ್ಧಿ ಇಲಾಖೆಯ ಮೂಲಕ ವಿಶ್ವಕರ್ಮ ಸಮುದಾಯದ ಯುವಕರಿಗೆ ತರಬೇತಿ ಒದಗಿಸಿ ಸ್ವಯಂ ಉದ್ಯೋಗಕ್ಕೆ ಪ್ರೋತ್ಸಾಹ ನೀಡಬೇಕು ಎಂದು ತಿಳಿಸಿದರು.

ಬೀದಿಬದಿ ವ್ಯಾಪಾರಸ್ಥರು ಮತ್ತು ಸಣ್ಣ ವ್ಯಾಪಾರಿಗಳಿಗೆ ಬ್ಯಾಂಕಿಂಗ್ ಸೇವೆಗಳು ಹಾಗೂ ಸಾಲ ಸೌಲಭ್ಯಗಳು ಸುಲಭವಾಗಿ ದೊರೆಯಬೇಕು. ಅವರಿಗೆ ಕ್ರೆಡಿಟ್ ಕಾರ್ಡ್ ಸೇರಿದಂತೆ ವಿವಿಧ ಹಣಕಾಸು ಸೌಲಭ್ಯಗಳನ್ನು ಒದಗಿಸುವ ಮೂಲಕ ಜೀವನಮಟ್ಟ ಸುಧಾರಣೆಗೆ ಸಹಕಾರಿಯಾಗಬೇಕು ಎಂದು ಹೇಳಿದರು.

ಈ ಸಂದರ್ಭದಲ್ಲಿ ಕರ್ನಾಟಕ ಬ್ಯಾಂಕ್ ಅಧಿಕಾರಿಗಳ ಕಾರ್ಯವೈಖರಿಯ ಬಗ್ಗೆ ಅಸಮಾಧಾನ ವ್ಯಕ್ತಪಡಿಸಿದ ಅವರು, ಎಲ್ಲಾ ಬ್ಯಾಂಕುಗಳು ಪ್ರಾದೇಶಿಕ ಅಸಮತೋಲನ ನಿವಾರಣೆಯತ್ತ ಗಮನ ಹರಿಸಿ ಬಡವರ ಸಬಲೀಕರಣಕ್ಕೆ ಹೆಚ್ಚಿನ ಆದ್ಯತೆ ನೀಡಬೇಕು ಎಂದು ಸೂಚಿಸಿದರು.

ಪ್ರತಿದಿನ ದುಡಿದು ಬದುಕುವ ಸಾಮಾನ್ಯ ಜನರು ಹೆಚ್ಚಿನ ಪ್ರಮಾಣದಲ್ಲಿ ಬ್ಯಾಂಕಿಂಗ್ ವ್ಯವಸ್ಥೆಯ ವ್ಯಾಪ್ತಿಗೆ ಬರಬೇಕು. ಕೃಷಿ ಮತ್ತು ಗ್ರಾಮೀಣ ಆರ್ಥಿಕತೆಯೊಂದಿಗೆ ಹೊಂದಾಣಿಕೆ ಸಾಧಿಸಿ ಬ್ಯಾಂಕುಗಳು ಅಭಿವೃದ್ಧಿಯತ್ತ ಸಾಗಬೇಕು. ಸಮಗ್ರ ಆರ್ಥಿಕ ಬೆಳವಣಿಗೆಯನ್ನು ಗಮನದಲ್ಲಿಟ್ಟುಕೊಂಡು ಕಾರ್ಯನಿರ್ವಹಿಸಿದರೆ ಜಿಲ್ಲೆ ಹಾಗೂ ರಾಜ್ಯದ ಅಭಿವೃದ್ಧಿಗೆ ಬ್ಯಾಂಕಿಂಗ್ ಕ್ಷೇತ್ರ ಮಹತ್ತರ ಕೊಡುಗೆ ನೀಡಲಿದೆ ಎಂದು ಬಸವರಾಜ ಬೊಮ್ಮಾಯಿ ಹೇಳಿದರು.

ಕೃಷಿ ಕ್ಷೇತ್ರದ ಬೆಳವಣಿಗೆಯೇ ದೇಶದ ಸಮಗ್ರ ಆರ್ಥಿಕ ಅಭಿವೃದ್ಧಿಗೆ ಅಡಿಪಾಯವಾಗಿದ್ದು, ರೈತರಿಗೆ ಹೆಚ್ಚಿನ ಪ್ರಮಾಣದಲ್ಲಿ ಕೃಷಿ ಸಾಲ ವಿತರಿಸುವ ಮೂಲಕ ಅವರ ಕೊಳ್ಳುವ ಶಕ್ತಿ ಹೆಚ್ಚಿಸಲು ಬ್ಯಾಂಕುಗಳು ಮುಂದಾಗಬೇಕು ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ ಬೊಮ್ಮಾಯಿ ಬ್ಯಾಂಕುಗಳಿಗೆ ಕರೆ ನೀಡಿದರು.

ಸಭೆಯಲ್ಲಿ ಜಿಲ್ಲಾ ಲೀಡ್ ಬ್ಯಾಂಕ್ ವ್ಯವಸ್ಥಾಪಕ ಸಂತೋಷ್ ಎಂ.ವಿ. ಅವರು 2025–26ನೇ ಸಾಲಿನ ನಾಲ್ಕನೇ ತ್ರೈಮಾಸಿಕದ (31–03–2026ರ ಅಂತ್ಯದವರೆಗೆ) ಬ್ಯಾಂಕಿಂಗ್ ಪ್ರಗತಿ ವರದಿಯನ್ನು ಮಂಡಿಸಿದರು.

ಮಾರ್ಚ್ 2026ರ ತ್ರೈಮಾಸಿಕ ಅಂತ್ಯದ ವೇಳೆಗೆ ಒಟ್ಟಾರೆ ಆದ್ಯತಾ ವಲಯದ ಸಾಲ ವಿತರಣೆಯಲ್ಲಿ ಜಿಲ್ಲೆ ಶೇ. 98.73ರಷ್ಟು ಗುರಿ ಸಾಧನೆ ಮಾಡಿದೆ. ಕೃಷಿ ವಲಯದಲ್ಲಿ ಶೇ. 99.54, ಎಂಎಸ್‌ಎಂಇ ವಲಯದಲ್ಲಿ ಶೇ. 93.72, ಶಿಕ್ಷಣ ವಲಯದಲ್ಲಿ ಶೇ. 100.03, ವಸತಿ ವಲಯದಲ್ಲಿ ಶೇ. 89.22 ಹಾಗೂ ಇತರೆ ವಲಯಗಳಲ್ಲಿ ಶೇ. 105.67ರಷ್ಟು ಪ್ರಗತಿ ದಾಖಲಾಗಿದೆ ಎಂದು ವಿವರಿಸಿದರು.

ಗದಗ ಜಿಲ್ಲೆಯ ತಾಲೂಕುವಾರು ಆದ್ಯತಾ ವಲಯದ ಗುರಿ ಸಾಧನೆ ಕುರಿತು ಮಾಹಿತಿ ನೀಡಿದ ಅವರು, ಗದಗ ತಾಲೂಕಿನಲ್ಲಿ ಶೇ. 93.93, ಗಜೇಂದ್ರಗಡದಲ್ಲಿ ಶೇ. 107.54, ಲಕ್ಷ್ಮೇಶ್ವರದಲ್ಲಿ ಶೇ. 156.32, ಮುಂಡರಗಿಯಲ್ಲಿ ಶೇ. 96.67, ನರಗುಂದದಲ್ಲಿ ಶೇ. 110.26, ರೋಣದಲ್ಲಿ ಶೇ. 95.39 ಹಾಗೂ ಶಿರಹಟ್ಟಿಯಲ್ಲಿ ಶೇ. 78.12ರಷ್ಟು ಗುರಿ ಸಾಧನೆಯಾಗಿದೆ ಎಂದು ತಿಳಿಸಿದರು.

ಮಾರ್ಚ್ 2026ರ ತ್ರೈಮಾಸಿಕ ಅಂತ್ಯದ ವೇಳೆಗೆ ಆದ್ಯತಾ ವಲಯದ ಸಾಲ ವಿತರಣೆಯಲ್ಲಿ ಇತರೆ ವಾಣಿಜ್ಯ ಬ್ಯಾಂಕುಗಳು ಶೇ. 86.96, ಪ್ರಮುಖ ಬ್ಯಾಂಕುಗಳಾದ ಕೆನರಾ ಬ್ಯಾಂಕ್, ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ, ಯೂನಿಯನ್ ಬ್ಯಾಂಕ್ ಆಫ್ ಇಂಡಿಯಾ ಹಾಗೂ ಬ್ಯಾಂಕ್ ಆಫ್ ಬರೋಡಾ ಒಟ್ಟಾಗಿ ಶೇ. 105.03, ಇತರೆ ರಾಷ್ಟ್ರೀಕೃತ ಬ್ಯಾಂಕುಗಳು ಶೇ. 131.20, ಕರ್ನಾಟಕ ಗ್ರಾಮೀಣ ಬ್ಯಾಂಕ್ ಶೇ. 88.61 ಹಾಗೂ ಸ್ಮಾಲ್ ಫೈನಾನ್ಸ್ ಬ್ಯಾಂಕುಗಳು ಶೇ. 129.28ರಷ್ಟು ಸಾಧನೆ ಮಾಡಿವೆ ಎಂದು ಸಭೆಗೆ ವಿವರಿಸಿದರು.

ಪ್ರಧಾನಮಂತ್ರಿ ಸ್ವನಿಧಿ ಯೋಜನೆಯಡಿ ಈರವರೆಗೆ ಒಟ್ಟು 7,093 ಅರ್ಜಿಗಳು ಮಂಜೂರಾಗಿದ್ದು, ಅವುಗಳಲ್ಲಿ 6,944 ಫಲಾನುಭವಿಗಳಿಗೆ ಸಾಲ ವಿತರಿಸಲಾಗಿದೆ ಎಂದು ತಿಳಿಸಿದರು.

ಇದೇ ಸಂದರ್ಭದಲ್ಲಿ ಪ್ರಧಾನಮಂತ್ರಿ ಮುದ್ರಾ ಯೋಜನೆ, ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮದ ಉದ್ಯೋಗಿನಿ ಯೋಜನೆ, ಕಒಈಒಇ, ಕಒಇಉಕ, ಅಟಲ್ ಪಿಂಚಣಿ ಯೋಜನೆ (ಂಕಙ), ಪ್ರಧಾನಮಂತ್ರಿ ಸುರಕ್ಷಾ ಬಿಮಾ ಯೋಜನೆ (ಕಒಖಃಙ) ಹಾಗೂ ಪ್ರಧಾನಮಂತ್ರಿ ಜನಧನ್ ಯೋಜನೆ (ಕಒಎಆಙ) ಸೇರಿದಂತೆ ವಿವಿಧ ಕೇಂದ್ರ ಮತ್ತು ರಾಜ್ಯ ಸರ್ಕಾರದ ಯೋಜನೆಗಳ ಪ್ರಗತಿ ಕುರಿತು ಸಭೆಯಲ್ಲಿ ಚರ್ಚಿಸಲಾಯಿತು.

ಅಲ್ಲದೇ ಸಭೆಯಲ್ಲಿ ಜಿಲ್ಲೆಯ ಬ್ಯಾಂಕಿಂಗ್ ಪ್ರಗತಿ, ಸಾಲ ವಿತರಣೆ, ಸ್ವಸಹಾಯ ಸಂಘಗಳ ಹಣಕಾಸು ಸ್ಥಿತಿ ಹಾಗೂ ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ವಿವಿಧ ಯೋಜನೆಗಳ ಅನುಷ್ಠಾನದ ಕುರಿತು ಸಮಗ್ರ ಪರಿಶೀಲನೆ ನಡೆಸಲಾಯಿತು.

ಈ ಸಂಧರ್ಭದಲ್ಲಿ ನರಗುಂದ ಶಾಸಕ ಸಿ ಸಿ ಪಾಟೀಲ್, ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಪಂಚಾಯತಿ ಮುಖ್ಯ ಕಾರ್ಯನಿರ್ವಹಣಾ ಅಧಿಕಾರಿ ಸಿ ಎನ್ ಶ್ರೀಧರ್, ಜಿಲ್ಲಾ ಪಂಚಾಯತಿಯ ಉಪ ಕಾರ್ಯದರ್ಶಿ ಸಿ ಆರ್ ಮುಂಡರಗಿ, ಆರ್, ಆರ್.ಬಿ.ಐ ಅಧಿಕಾರಿ ವಿಜಯಶ್ರೀ, ನಬಾರ್ಡನ ಎ ಜಿ ಎಂ ಹನುಮಂತರಾಜು, ಎಸ್.ಬಿ.ಐನ ರಿಜಿನಲ್ ಮ್ಯಾನೇಜರ ರಾಘವೇಂದ್ರ ರಾವ್, ಲೀಡ್ ಬ್ಯಾಂಕಿನ ಮ್ಯಾನೇಜರ ಸಂತೋಷಕುಮಾರ ಸೇರಿದಂತೆ ಬ್ಯಾಂಕಿನ ಹಿರಿಯ ಅಧಿಕಾರಿಗಳು, ವಿವಿಧ ಇಲಾಖೆಯ ಅಧಿಕಾರಿಗಳು ಹಾಜರಿದ್ದರು.

# ಜಿಲ್ಲೆಯಲ್ಲಿ ಮುಂದಿನ ಮೂರು ದಿನಗಳವರೆಗೆ ಭಾರಿ ಮಳೆ



**ಬೆಳಗಾವಿ ವಾರ್ತೆ ಧಾರವಾಡ:** ಕರ್ನಾಟಕ ರಾಜ್ಯ ನೈಸರ್ಗಿಕ ವಿಕೋಪ ಉಸ್ತುವಾರಿ ಕೇಂದ್ರದ ವರದಿಯಂತೆ, ಧಾರವಾಡ ಜಿಲ್ಲೆಯಲ್ಲಿ ಮುಂಗಾರು ಹಂಗಾಮು ಚುರುಕಾಗಿದ್ದು, ಮುಂದಿನ ಮೂರು ದಿನಗಳವರೆಗೆ ಆರೆಂಜ್ ಹಾಗೂ ರೆಡ್ ಅಲರ್ಟ್ ಘೋಷಣೆ ಮಾಡಲಾಗಿದ್ದು, ಧಾರವಾಡ ಜಿಲ್ಲೆಯಲ್ಲಿ ಹಾಗೂ ಬೆಣ್ಣಿಹಳ್ಳ ಮತ್ತು ತುಪ್ಪರಿಹಳ್ಳ ಅಚ್ಚು-ಕಟ್ಟು ಪ್ರದೇಶದಲ್ಲಿ ಭಾರಿ ಮಳೆ, ಪ್ರವಾಹದ ಸಾಧ್ಯತೆಯಿರುವ ಹಿನ್ನಲೆಯಲ್ಲಿ ಸಾರ್ವಜನಿಕರು ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳಬೇಕೆಂದು ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಅಧ್ಯಕ್ಷರು ಆಗಿರುವ ಜಿಲ್ಲಾಧಿಕಾರಿ ಸ್ನೇಹಲ್ ಆರ್. ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಈ ಕುರಿತು ಪ್ರಕಟಣೆ ನೀಡಿರುವ ಅವರು, ಭಾರಿ ಮಳೆಯಿಂದ ನೀರಿನ ಮಟ್ಟದಲ್ಲಿನ ಏರಿಕೆಯಾಗಿ ಪ್ರವಾಹ ಉಂಟಾಗುವ ಸಾಧ್ಯತೆ ಇರುತ್ತದೆ. ಇದರಿಂದ ಬೆಣ್ಣಿಹಳ್ಳ ಮತ್ತು ತುಪ್ಪರಿ ಹಳ್ಳಗಳಲ್ಲಿ, ನಗರ ಪ್ರದೇಶ ತಗ್ಗು ಪ್ರದೇಶಗಳಲ್ಲಿ, ಕಲ್ಲಿನ ಕ್ವಾರಿಗಳು, ಕಾಲುವೆಗಳು, ಕೃಷಿ ಹೊಂಡಗಳು, ತುಂಬಿ ಹರಿಯುವ ಚರಂಡಿಗಳು ಮತ್ತು ಪ್ರವಾಹ ಪೀಡಿತ ಪ್ರದೇಶಗಳ ಬಳಿ ಆಟವಾಡುವುದು, ಈಜುವುದು ಮತ್ತು ಸಂಚರಿಸಬಾರದು ಎಂದು ತಿಳಿಸಿದ್ದಾರೆ.

ಭಾರಿ ಮಳೆಯಿಂದಾಗಿ ಬೆಣ್ಣಿಹಳ್ಳ ಮತ್ತು ತುಪ್ಪರಿಹಳ್ಳಗಳಲ್ಲಿ ನೀರಿನ ಹೆಚ್ಚಿನ ಹರಿವಿನಿಂದ ಮುಳುಗಿರುವ ಸೇತುವೆ, ಮೇಲ್ಮಟ್ಟದಲ್ಲಿ ಹರಿಯುವ ಕಲ್ವರ್ಟಗಳನ್ನು ದಾಟಲು ಪ್ರಯತ್ನಿಸಬಾರದು. ಜನ-ಜಾನುರುಗಳು ನೀರಿನ ಸೆಳೆತಕ್ಕೆ ಸಿಲುಕುವ ಸಾಧ್ಯತೆಗಳಿರುವದರಿಂದ ಎಚ್ಚರಿಕೆ ವಹಿಸಬೇಕು. ಹಳ್ಳ-ಕೊಳ್ಳಗಳು, ಜಲಪಾತಗಳು, ಕೆರೆಗಳು, ಕೃಷಿ ಹೊಂಡಗಳು ಅಪಾಯ ಮಟ್ಟಕ್ಕಿಂತ ಹೆಚ್ಚಾಗಿ ನೀರು ಸಂಗ್ರಹವಿರುವ ಸ್ಥಳಗಳ ಹತ್ತಿರ ಸಾರ್ವಜನಿಕರು ಸೆಲ್ಫಿ ಅಥವಾ ಫೋಟೋಗಳನ್ನು ತೆಗೆಯಲು ಹೋಗಬಾರದು ಎಂದು ತಿಳಿಸಿದ್ದಾರೆ.

ವಿಶೇಷವಾಗಿ ಜಲ ಮೂಲಗಳು ತಗ್ಗು ಪ್ರದೇಶದಲ್ಲಿ ಮತ್ತು ಪ್ರವಾಹ ಪೀಡಿತ ಜನವಸತಿ ಪ್ರದೇಶಗಳಲ್ಲಿ ಪೋಷಕರು ತಮ್ಮ ಮಕ್ಕಳ ಬಗ್ಗೆ ವಿಶೇಷ ಕಾಳಜಿವಹಿಸಬೇಕು. ಪ್ರವಾಹ ಸಂದರ್ಭಗಳಲ್ಲಿ, ಶಿಥಿಲಗೊಂಡ ಸೇತುವೆಗಳು, ಅದೃಶ್ಯ ತೆರೆದ ಮ್ಯಾನ್‌ಹೋಲ್‌ಗಳು, ಹಾನಿಗೊಂಡ ರಸ್ತೆಗಳ ಮುಖಾಂತರ ಸಂಚರಿಸಬಾರದು. ಈ ಪ್ರದೇಶದಲ್ಲಿ ನೀರಿನ ಸೆಳೆತದಿಂದ ಗಂಭೀರ ಪ್ರಮಾಣದ ಅಪಾಯವನ್ನುಂಟು ಮಾಡಬಹುದು. ಆದ್ದರಿಂದ ಪ್ರವಾಹದ ನೀರಿನಲ್ಲಿ ಸಂಚಾರ ಮಾಡಬಾರದು.

ವಿದ್ಯುತ್ ಸಂಪರ್ಕ ಕಲ್ಪಿಸುವ ಸ್ಥಾವರ, ರಚನೆಗಳ ಬಳಿ ನೀರಿನಿಂದ ಆವೃತಗೊಂಡ ಪ್ರದೇಶಗಳು, ಶಿಥಿಲಗೊಂಡ, ಮುರಿದು ಬಿದ್ದ ವಿದ್ಯುತ್ ಕಂಬಗಳು, ಕಡಿತಗೊಂಡ ವಿದ್ಯುತ್ ತಂತಿಗಳನ್ನು ಮುಟ್ಟಬಾರದು. ಮತ್ತು ಸಮೀಪಕ್ಕೆ ತೆರಳದಂತೆ ಹಾಗೂ ವಿದ್ಯುತ್ ಕಂಬಗಳಿಗೆ ಜಾನುವಾರುಗಳನ್ನು ಕಟ್ಟಬಾರದು.

ನಿರಂತರ ಮಳೆಯಿಂದ ಅಪಾಯವಿರುವ ಮನೆ, ಗೋಡೆ ಇತರೆ ಕಟ್ಟಡಗಳು ಕುಸಿಯುವ ಸಂದರ್ಭವಿರುತ್ತದೆ ಹಾಗೂ ಶಿಥಿಲಾವಸ್ಥೆಯಲ್ಲಿ ಮರಗಳು ಬೀಳುವ ಸಂಭವವಿರುತ್ತವೆ. ಇದರಿಂದ ಸಾವು ನೋವುಗಳು ಸಂಭವಿಸುವ ಸಂದರ್ಭವಿರುವುದರಿಂದ ಸಾರ್ವಜನಿಕರಿಗೆ ಸುರಕ್ಷತೆಯ ದೃಷ್ಟಿಯಿಂದ ಮುನ್ನೆಚ್ಚರಿಕೆಯ ಕ್ರಮ ಕೈಗೊಳ್ಳಬೇಕು ಎಂದು ತಿಳಿಸಿದ್ದಾರೆ.

ತುರ್ತು ಸಂದರ್ಭದಲ್ಲಿ ಸಾರ್ವಜನಿಕರ ಅನಕೂಲಕ್ಕಾಗಿ ಸಹಾಯವಾಣಿ : ಧಾರವಾಡ ಜಿಲ್ಲಾಧಿಕಾರಿಗಳ ಕಾರ್ಯಾಲಯ 0836–2445508 ಮತ್ತು 1077, ಧಾರವಾಡ ಉಪವಿಭಾಗಾಧಿಕಾರಿಗಳ ಕಾರ್ಯಾಲಯ ಸಂಖ್ಯೆ : 0836–2233860, ಹುಬ್ಬಳ್ಳಿ ನಗರ ತಹಶೀಲ್ದಾರ ಕಾರ್ಯಾಲಯ ಸಂಖ್ಯೆ : 0836–2358035, ಅಳ್ನಾವರ ತಹಶೀಲ್ದಾರ ಕಾರ್ಯಾಲಯ ಸಂಖ್ಯೆ : 0836–2385544, ನವಲಗುಂದ ತಹಶೀಲ್ದಾರ ಕಾರ್ಯಾಲಯ ಸಂಖ್ಯೆ : 08380–229240, ಕುಂದಗೋಳ ತಹಶೀಲ್ದಾರ ಕಾರ್ಯಾಲಯ ಸಂಖ್ಯೆ : 08304–290239, ಹುಬ್ಬಳ್ಳಿ ತಹಶೀಲ್ದಾರ ಕಾರ್ಯಾಲಯ ಸಂಖ್ಯೆ : 0836–22338449, ಧಾರವಾಡ ತಹಶೀಲ್ದಾರ ಕಾರ್ಯಾಲಯ ಸಂಖ್ಯೆ : 0836–2233822, ಕಲಘಟಗಿ ತಹಶೀಲ್ದಾರ ಕಾರ್ಯಾಲಯ ಸಂಖ್ಯೆ : 08370–284535, ಅಣ್ಣಿಗೇರಿ ತಹಶೀಲ್ದಾರ ಕಾರ್ಯಾಲಯ ಸಂಖ್ಯೆ : 9482151566, ಹುಬ್ಬಳ್ಳಿ-ಧಾರವಾಡ ಮಹಾನಗರ ಪಾಲಿಕೆ ಕಾರ್ಯಾಲಯದ ಸಂಖ್ಯೆ : 0836–2213869 ಗಳಿಗೆ ತುರ್ತು ಸಂದರ್ಭದಲ್ಲಿ ಸಂಪರ್ಕಿಸಬಹುದು ಎಂದು ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಅಧ್ಯಕ್ಷರು ಆಗಿರುವ ಜಿಲ್ಲಾಧಿಕಾರಿ ಸ್ನೇಹಲ್ ಆರ್. ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಡಿಪ್ಲೋಮಾ ಕೋರ್ಸ್‌ಗಳ ಪ್ರವೇಶಕ್ಕೆ ಅರ್ಜಿ ಆಹ್ವಾನ

**ಬೆಳಗಾವಿ ವಾರ್ತೆ ಗದಗ:** 2026–27ನೇ ಶೈಕ್ಷಣಿಕ ಸಾಲಿಗೆ ಸರ್ಕಾರಿ ಪಾಲಿಟೆಕ್ನಿಕ್, ನಾಗಸಮುದ್ರ ರಸ್ತೆ, ನರಸಾಪೂರ, ಗದಗ ಸಂಸ್ಥೆಯಲ್ಲಿ ಸಿವಿಲ್, ಮೆಕ್ಯಾನಿಕಲ್, ಇ&ಸಿ ಹಾಗೂ ಕಂಪ್ಯೂರ್ಸ್ ಸೈನ್ಸ್ 2ನೇ ವರ್ಷ/3ನೇ ಸೆಮಿಸ್ಟರ್ ಡಿಪ್ಲೋಮಾ ಕೋರ್ಸ್‌ಗಳಿಗೆ ಆಫ್-ಲೈನ್ ಮೂಲಕ ಅರ್ಹ ಅಭ್ಯರ್ಥಿಗಳಿಗೆ ಅರ್ಜಿ ಆಹ್ವಾನಿಸಲಾಗಿದೆ. ಐ.ಟಿ.ಐ.ಅಥವಾ ದ್ವಿತೀಯ ಪಿ.ಯು.ಸಿ.(ವಿಜ್ಞಾನ) ತಾಂತ್ರಿಕ ವಿಷಯಗಳಲ್ಲಿ ಉತ್ತೀರ್ಣರಾಗಿರಬೇಕು.ಅರ್ಜಿ ಸಲ್ಲಿಸಲು ಜೂನ್ 23 ಕೊನೆಯ ದಿನವಾಗಿದೆ.

ಸರ್ಕಾರಿ ಪಾಲಿಟೆಕ್ನಿಕ್ ಗದಗ ಸಂಸ್ಥೆಯಲ್ಲಿ 2ನೇ ವರ್ಷ/3ನೇ ಸೆಮಿಸ್ಟರ್ ಡಿಪ್ಲೋಮಾ ಪ್ರವೇಶ ಬಯಸುವ ಅರ್ಹ ಅಭ್ಯರ್ಥಿಗಳು ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆಯ ವೆಬ್‌ಸೈಟ್ dtetech.karnataka.gov.in/ kartechnical ಅಥವಾ dtek.karnataka.gov.in ಗಳಲ್ಲಿ ಅರ್ಜಿ ನಮೂನೆ ಮತ್ತು ಇ-ಮಾಹಿತಿ ಪುಸ್ತಕವನ್ನು ಡೌನ್‌ಲೋಡ್ ಮಾಡಿಕೊಂಡು, ಅರ್ಜಿಯನ್ನು ಇ-ಮಾಹಿತಿ ಪುಸ್ತಕದಲ್ಲಿರುವ ಸೂಚನೆಗಳನ್ವಯ ಸಂಪೂರ್ಣ ಭರ್ತಿ ಮಾಡಿಕೊಂಡು ಅವಶ್ಯವಿರುವ ಎಲ್ಲ ಮೂಲ ದಾಖಲಾತಿಗಳೊಂದಿಗೆ ಖುದ್ದಾಗಿ ಸಂಸ್ಥೆಗೆ ಬಂದು ಅರ್ಜಿಯನ್ನು ಸಲ್ಲಿಸಿ ಲಭ್ಯವಿರುವ ಸೀಟುಗಳಿಗೆ ಆಫ್-ಲೈನ್ ಮೂಲಕ ಮೆರಿಟ್ ಆಧಾರದ ಮೇರೆಗೆ ವೇಳಾಪಟ್ಟಿ ಪ್ರಕಾರ ಪ್ರವೇಶ ಪಡೆಯಬಹುದು.

ಹೆಚ್ಚಿನ ಮಾಹಿತಿಗಾಗಿ ಸರ್ಕಾರಿ ಪಾಲಿಟೆಕ್ನಿಕ್, ನಾಗಸಮುದ್ರ ರಸ್ತೆ, ನರಸಾಪೂರ, ಕಾಲೇಜಿನ ಕಛೇರಿಗೆ ಸಂಪರ್ಕಿಸಬಹುದು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.




**ಬೆಳಗಾವಿ ವಾರ್ತೆ ಧಾರವಾಡ:** ಶಾಸಕರ ಅನುದಾನದಡಿಯಲ್ಲಿ ಇಸಿಜಿ ಯಂತ್ರ ವಿತರಣಾ ಕಾರ್ಯಕ್ರಮ ಹಾಗೂ ಶಾಸಕರ ಸ್ಥಳೀಯರ ಪ್ರದೇಶಾಭಿವೃದ್ಧಿ ಯೋಜನೆ ಅಡಿಯಲ್ಲಿ 12 ಆಸ್ಪತ್ರೆಗಳಿಗೆ ಇಸಿಜಿ ಮಶೀನ್ ವಿತರಣೆ ಹಾಗೂ ಹೃದಯ ರೋಗದ ಅರಿವು ಕಾರ್ಯಕ್ರಮಕ್ಕೆ ಶಾಸಕರಾದ ಪ್ರಸಾದ್ ಅಬ್ಬಯ್ಯ ಅವರು ನಗರದ ಪಾಲಿಕೆ ಆವರಣದಲ್ಲಿರುವ ಕಛೇರಿಯಯಲ್ಲಿ ಚಾಲನೆ ನೀಡಿದರು. ಈ ಸಂದರ್ಭದಲ್ಲಿ ಪಾಲಿಕೆ ಆಯುಕ್ತರಾದ ಡಾ. ರುದ್ರೇಶ ಘಾಳಿ, ಪಾಲಿಕೆ ವೈದ್ಯಾಧಿಕಾರಿ ಶ್ರೀಧರ ದಂಡೆಪ್ಪನವರ, ಡಿಎಚ್‌ಓ ಪರಶುರಾಮ, ಡಾ. ಅಮಿತ್ ಸತ್ತೂರ, ವೈದ್ಯಾದಿಕಾರಿಗಳು ಉಪಸ್ಥಿತರಿದ್ದರು.



ಹುಬ್ಬಳ್ಳಿ-ಧಾರವಾಡ ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿನ ನಗರದ ಜೆಸಿ ನಗರದಲ್ಲಿರುವ ಟೌನ್ ಹಾಲ್‌ನ್ನು ರಂಗಭೂಮಿ ಚಟುವಟಿಕೆಗಳಿಗಾಗಿ ಸಿದ್ದಪಡಿಸಿ ಕೊಡುವುದರ ಕುರಿತು ಸ್ವರ್ಣ ರಂಗಭೂಮಿ ಸಂಘದ ವತಿಯಿಂದ ನಗರದ ಪಾಲಿಕೆ ಆವರಣದಲ್ಲಿ ಪ್ರತಿಭಟಿಸಿ ಪಾಲಿಕೆ ಆಯುಕ್ತರಿಗೆ ಮನವಿ ಸಲ್ಲಿಸಲಾಯಿತು.



ಮಾಜಿ ಸಚಿವ ಹಾಗೂ ಕಲಘಟಗಿ ವಿಧಾನ ಸಭಾ ಕ್ಷೇತ್ರದ ಶಾಸಕ ಸಂತೋಷ್ ಲಾಡ್ ಅವರಿಗೆ ಸಚಿವ ಸ್ಥಾನ ಕೊಡಬೇಕು ಎಂದು ಸಂತೋಷ ಲಾಡ್ ಅಭಿಮಾನಿ ಬಳಗದ ವತಿಯಿಂದ ನಗರದಲ್ಲಿಪ್ರತಿಭಟನೆ ನಡೆಸಲಾಯಿತು. ನಗರದಹುಬ್ಬಳ್ಳಿಯ ರೈಲ್ವೆ ಸ್ಟೇಷನ್ ಹತ್ತಿರವಿರುವ ಡಾ. ಬಿ.ಆರ್. ಅಂಬೇಡ್ಕರ್ ಪುತ್ಥಳಿಯ ಹತ್ತಿರ ಘೋಷಣೆ ಕೂಗಿ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಹಾಗೂ ಕಾಂಗ್ರೆಸ್ ಪಕ್ಷದ ವರಿಷ್ಠರಿಗೆ ಒತ್ತಾಯ ಮಾಡಿದರು. ಸಂತೋಷ್ ಲಾಡ್ ಅಭಿಮಾನಿ ಬಳಗದ ಮುಖಂಡರಾದ ಚಂದ್ರಶೇಖರ ಜುಟ್ಟಲ್, ಶಿವಾನಂದ ಮುತ್ತಣ್ಣವರ, ಪ್ರೇಮನಾಥ ಚಿಕ್ಕತುಂಬಳ, ಅರ್ಜುನ್ ಪಾಟೀಲ್, ನೆಹರು ಪಾಟೀಲ, ಹಮೀದ್ ಕೊಪ್ಪದ, ಬಿಷ್ಟು ಬೆಳಗಾವಿ, ರಾಜು ದೊಡ್ಡ ಶಂಕರ, ರಾಜೇಸಾಬ್ ಕಳ್ಳಿಮನಿ, ಪ್ರವೀಣ ಕಟ್ಟಿಮನಿ, ಕಾಂತು ದೊಡ್ಡಮನಿ ಹಾಗೂ ಅಭಿಮಾನಿಗಳು ಭಾಗವಹಿಸಿದ್ದರು.

# ಉನ್ನತ ಬೌದ್ಧಿಕ ಆಸ್ತಿ ಹಕ್ಕುಗಳ ಕುರಿತು ತರಬೇತಿಗೆ ನೋಂದಣಿ

ಬಾಗಲಕೋಟೆ: ಕರ್ನಾಟಕ ವಿಜ್ಞಾನ ಮತ್ತು ತಂತ್ರಜ್ಞಾನ ಅಕಾಡೆಮಿಯ ವತಿಯಿಂದ ಉನ್ನತ ಬೌದ್ಧಿಕ ಆಸ್ತಿ ಹಕ್ಕುಗಳು ವಿಷಯ ಕುರಿತು ಜೂನ್ 16 ರಿಂದ 20 ವರೆಗೆ 5 ದಿನಗಳ ತರಬೇತಿ ಕಾರ್ಯಾಗಾರವನ್ನು ಹಮ್ಮಿಕೊಳ್ಳಲಾಗಿದೆ. ಕಾರ್ಯಾಗಾರದಲ್ಲಿ ವಿವಿಧ ಪ್ರತಿಷ್ಠಿತ ಸಂಸ್ಥೆಗಳ ಹೆಸರಾಂತ ವಿಜ್ಞಾನಿಗಳು ಮತ್ತು ತಂತ್ರಜ್ಞಾನಿಗಳು ಉಪನ್ಯಾಸ ನೀಡಲಿದ್ದಾರೆ. ಆಸಕ್ತ ವಿಜ್ಞಾನ ಪದವಿ, ಸ್ನಾತಕೋತ್ತರ ಪದವಿ ಹಾಗೂ ಸಂಶೋಧನಾ ವಿದ್ಯಾರ್ಥಿಗಳು, ಉಪನ್ಯಾಸಕರು, ಪ್ರಾಧ್ಯಾಪಕರು, ವಿಜ್ಞಾನಾಸಕ್ತರು ಹಾಗೂ ಕೈಗಾರಿಕೋದ್ಯಮದ ಪ್ರತಿನಿಧಿಗಳು ಭಾಗವಹಿಸಬಹುದಾಗಿದೆ. ಆಸಕ್ತರು ಜೂನ್ 12 ರೊಳಗಾಗಿ ಲಿಂಕ್ ಮೂಲಕ http://forms.gle/iwHJD5CxnccCfw4u5 ನೋಂದಾಯಿಸಿಕೊಳ್ಳಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಕಾರ್ಯಾಗಾರದ ಸಂಯೋಜಕ ವಿ.ಜಿ.ಉಮೇಶ (9743084194) ಇವರನ್ನು ಸಂಪರ್ಕಿಸಬಹುದಾಗಿದೆ.

# ಪರಿಸರ ಸಂರಕ್ಷಣೆಗೆ ಎಲ್ಲರೂ ಕೈಜೋಡಿಸಬೇಕು: ಲಕ್ಷ್ಮಿದೇವಿ



**ಬೆಳಗಾವಿ ವಾರ್ತೆ ವಿಜಯಪುರ:** ಪರಿಸರವು ಪ್ರತಿಯೊಂದು ಜೀವಿಯ ಉಸಿರಾಗಿದ್ದು, ಅದರ ಸಂರಕ್ಷಣೆ ಪ್ರತಿಯೊಬ್ಬರ ಜವಾಬ್ದಾರಿಯಾಗಿದೆ. ಪರಿಸರಕ್ಕೆ ಹಾನಿಯಾಗುವ ವಸ್ತುಗಳ ಬಳಕೆಯನ್ನು ತೊರೆದು ಪರಿಸರ ಸಂರಕ್ಷಣೆಗೆ ಎಲ್ಲರೂ ಕೈಜೋಡಿಸಬೇಕು ಎಂದು ಮಹಿಳಾ ಅಧ್ಯಯನ ಕೇಂದ್ರದ ನಿರ್ದೇಶಕಿ ಹಾಗೂ ಮುಖ್ಯಸ್ಥೆ ಪ್ರೊ. ಲಕ್ಷ್ಮಿದೇವಿ ವಾಯ್ ಹೇಳಿದರು.

ನಗರದ ಕರ್ನಾಟಕ ರಾಜ್ಯ ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾನಿಲಯಯ ಅಹಲ್ಯಾಬಾಯಿ ಸ್ನಾತಕೋತ್ತರ ಮಹಿಳಾ ಅಧ್ಯಯನ, ಸಂಶೋಧನೆ ಮತ್ತು ವಿಸ್ತರಣಾ ಕೇಂದ್ರದ ವತಿಯಿಂದ "ಅಹಲ್ಯೆಯ ನಡಿಗೆ ಗ್ರಾಮದ ಕಡೆಗೆ" ಎಂಬ ಧ್ಯೇಯದೊಂದಿಗೆ ವಿಶ್ವ ಪರಿಸರ ದಿನಾಚರಣೆ ಅಂಗವಾಗಿ ಜೂನ್ 5ರಂದು ಹಮ್ಮಿಕೊಂಡಿದ್ದ ತಾಜಪುರ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಸಸಿ ನೆಡುವಿಕೆ ಹಾಗೂ ಮಕ್ಕಳಿಗೆ ಪರಿಸರ ಅರಿವು ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಗ್ರಾಮದ ಸಮಗ್ರ ಅಧ್ಯಯನ ಹಾಗೂ ಅಭಿವೃದ್ಧಿ ಉದ್ದೇಶದಿಂದ ಯೋಜನೆಯನ್ನು ಹಮ್ಮಿಕೊಳ್ಳಲಾಗಿದ್ದು, ಅದರ ಭಾಗವಾಗಿ ಶಾಲೆ ಮತ್ತು ಗ್ರಾಮ ಪಂಚಾಯಿತಿಯ ಸಹಯೋಗದೊಂದಿಗೆ ಪರಿಸರ ದಿನಾಚರಣೆ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ ಎಂದು ತಿಳಿಸಿದರು.

ಗ್ರಾಮ ಪಂಚಾಯಿತಿ ಕಾರ್ಯದರ್ಶಿ ಚಂದ್ರಶೇಖರ ಬಿದರಿ ಮಾತನಾಡಿ, ಪರಿಸರವನ್ನು ಸ್ವಚ್ಛವಾಗಿಟ್ಟುಕೊಳ್ಳುವುದು ಪ್ರತಿಯೊಬ್ಬರ ಕರ್ತವ್ಯವಾಗಿದೆ. ಸರ್ಕಾರ ಜಾರಿಗೊಳಿಸಿರುವ ಸ್ವಚ್ಛ ಭಾರತ ಅಭಿಯಾನ ಕಾರ್ಯಕ್ರಮದ ಪ್ರಯೋಜನಗಳನ್ನು ಸದುಪಯೋಗಪಡಿಸಿಕೊಂಡು ಸಾಮಾಜಿಕ ಜವಾಬ್ದಾರಿಯನ್ನು ನಿಭಾಯಿಸಬೇಕು ಎಂದರು.

ಇದೇ ಸಂದರ್ಭದಲ್ಲಿ ಅಧ್ಯಕ್ಷತೆ ವಹಿಸಿದ್ದ ಶಾಲಾ ಮುಖ್ಯೋಪಾಧ್ಯಾಯ ಚಂದ್ರಕಾಂತ ದೊಡಮನಿ ಮಾತನಾಡಿ, ಇಂದಿನ ಮಕ್ಕಳು ನಾಳಿನ ಉತ್ತಮ ನಾಗರಿಕರಾಗಿದ್ದು, ಪರಿಸರ ಕುರಿತು ಮಕ್ಕಳಲ್ಲಿ ಅರಿವು ಮತ್ತು ಜಾಗೃತಿ ಮೂಡಿಸಬೇಕು ಎಂದರು.

ಕಾರ್ಯಕ್ರಮದಲ್ಲಿ ಡಾ. ಶಶಿಕಲಾ ರಾಠೋಡ, ಅಂಬಿಕಾ ಮಾಲಗಾರ, ಕಾವೇರಿ ಇಂಡಿಕರ, ಶಾಲಾ ಶಿಕ್ಷಕರು ಹಾಗೂ ಗ್ರಾಮದ ಜನರು ಮತ್ತಿತರು ಭಾಗವಹಿಸಿದ್ದರು.

ಶಾಲಾ ವಿದ್ಯಾರ್ಥಿನಿ ಸಾಕ್ಷಿ ಹಾಗೂ ಸಂಗಡಿಗರು ಪ್ರಾರ್ಥಿಸಿದರು. ಡಾ. ಭಾಗ್ಯಶ್ರೀ ದೊಡಮನಿ ನಿರೂಪಿಸಿದರು. ಡಾ. ಸರೋಜಾ ಸಂತಿ ವಂದಿಸಿದರು.

# ರಕ್ತದಾನ ಇದು ಶ್ರೇಷ್ಠದಾನ: ದ್ಯಾಪೂರ



**ಬೆಳಗಾವಿ ವಾರ್ತೆ ತಾಳಿಕೋಟೆ:** ರಕ್ತದಾನವೆಂಬುದು ಎಲ್ಲದಾನಗಳಲ್ಲಿ ಶ್ರೇಷ್ಠದಾನ ಇದಾಗಿದ್ದು ಒಬ್ಬ ವ್ಯಕ್ತಿಯೂ ರಕ್ತದಾನ ನೀಡುವಂತಹ ಒಂದು ಯುನಿಟ್ ರಕ್ತವು ಮೂರು ಜನರ ಪ್ರಾಣ ಉಳಿಸಬಲ್ಲದೆಂದು ಸ್ಥಳೀಯ ಸಮೂದಾಯ ಆರೋಗ್ಯ ಕೇಂದ್ರದ ಆಪ್ತ ಸಮಾಲೋಚಕರಾದ ಮಲ್ಲನಗೌಡ ದ್ಯಾಪೂರ ಅವರು ಹೇಳಿದರು.

ಸೋಮವಾರರಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಭ ಕಲ್ಯಾಣ ಇಲಾಖೆ ವಿಜಯಪುರ, ಹಾಗೂ ಸಮೂದಾಯ ಆರೋಗ್ಯ ಕೇಂದ್ರ ತಾಳಿಕೋಟೆ ಹಾಗೂ ಶ್ರೀ ಸಿದ್ದಲಿಂಗ ದೇವರ ಪ್ರೀಮಿಯರ್ ಕ್ರೀಕೇಟ್ ಬಳಗ ಮತ್ತು ಸಿದ್ದಲಿಂಗ ದೇವರ ಅಭಿಮಾನಿ ಬಳಗದ ವತಿಯಿಂದ ಶ್ರೀ ಸಿದ್ದಲಿಂಗ ದೇವರ 25ನೇ ಜನ್ಮದಿನೋತ್ಸವ ಅಂಗವಾಗಿ ಶ್ರೀ ಖಾಸ್ಗತೇಶ್ವರ ಮಠದಲ್ಲಿ ಏರ್ಪಡಿಸಲಾದ ರಕ್ತದಾನ ಶಿಬಿರದಲ್ಲಿ ಮಾತನಾಡುತ್ತಿದ್ದ ಅವರು ರಕ್ತದಾನವೆಂಬುದು ತುರ್ತು ಪರಸ್ಥಿತಿಗಳಲ್ಲಿ ಜೀವಗಳನ್ನು ಉಳಿಸುವ ಶ್ರೇಷ್ಠ ಕಾರ್ಯ ಮಾಡುತ್ತಲಿದೆ ರಕ್ತದಾನ ಮಾಡುವ ಮುನ್ನ ದಾನಿಗಳ ಆರೋಗ್ಯವನ್ನು ನಮ್ಮ ಇಲಾಖೆ ತಪಾಸಣೆ ಮಾಡುತ್ತದೆ ಎಂದ ಅವರು ಶ್ರೀ ಸಿದ್ದಲಿಂಗ ದೇವರ ಜನ್ಮದಿನೋತ್ಸವ ಅಂಗವಾಗಿ ಇಂದು ಏರ್ಪಡಿಸಲಾದಂತಹ ಈ ರಕ್ತದಾನ ಶಿಬಿರದಲ್ಲಿ 48 ಜನರು ರಕ್ತದಾನ ಮಾಡಿ ಪ್ರಶಸ್ತಿ ಪತ್ರವನ್ನು ಪಡೆದುಕೊಂಡಿದ್ದಾರೆ ರಕ್ತದಾನವೆಂಬುದನ್ನು ಮಾಡಿದರೆ ಆಪತ್ತುಕಾಲದಲ್ಲಿ ಅನ್ಯರಿಗೆ ಅನುಕೂಲವಾಗುತ್ತದೆ ಎಂಬ ವಿಚಾರವನ್ನು ಗಮನದಲ್ಲಿಟ್ಟುಕೊಂಡ ಶ್ರೀ ಸಿದ್ದಲಿಂಗ ದೇವರು ತಮ್ಮ ಜನ್ಮದಿನೋತ್ಸವದಲ್ಲಿ ಈ ಕಾರ್ಯಕ್ರಮವನ್ನು ಇಟ್ಟುಕೊಂಡು ಮಾದರಿಯ ಹಾಗೂ ಜನುಪಯೋಗಿಯಾಗುವಂತಹ ಕಾರ್ಯವನ್ನು ಮಾಡಿದ್ದಾರೆ ಈ ಕಾರ್ಯ ಕುರಿತು ಶ್ರೀ ಮಠದ ಉಸ್ತುವಾರಿಯಾದ ವೇ.ಮುರುಘೇಶ ವಿರಕ್ತಮಠ ಅವರು ಸಹಕಾರ ನೀಡಿರುವದು ಹೆಮ್ಮೆಯ ವಿಷಯವಾಗಿದೆ ಇಂತಹ ಕಾರ್ಯ ಪ್ರತಿವರ್ಷ ನಡೆಸುತ್ತಾ ಸಾಗಿರುವದು ಹೆಮ್ಮೆಯ ವಿಷಯವಾಗಿದೆ ಎಂದರು.

ರಕ್ತದಾನ ಶಿಬಿರದ ಮುಖ್ಯಕಾರ್ಯವನ್ನು ಜಿಲ್ಲಾ ಆರೋಗ್ಯ ಮತ್ತು ಕುಟುಂಭ ಕಲ್ಯಾಣ ಇಲಾಖೆಯ ಡಾ.ಅರಸಿದ್ದ ಮುಂಡರಗಿ ಅವರು ನೆರವೇರಿಸಿದರಲ್ಲದೇ ಈ ಕಾರ್ಯಕ್ರಮವನ್ನು ಏರ್ಪಡಿಸಿದ ಶ್ರೀ ಸಿದ್ದಲಿಂಗ ದೇವರ ಅಭಿಮಾನಿ ಬಳಗಕ್ಕೆ ಅಭಿನಂದನಾ ಪತ್ರ ನೀಡಿ ಗೌರವಿಸಿದರು.

ಈ ಕಾರ್ಯಕ್ರಮದಲ್ಲಿ ಶ್ರೀಮಠದ ಉಸ್ತುವಾರಿ ವೇ.ಮುರುಘೇಶ ವಿರಕ್ತಮಠ, ಹಾಗೂ ಆರೋಗ್ಯ ಇಲಾಖೆಯ ದೀಲಿಪಸಿಂಗ್, ಸ್ಟಾಪ್ ನರ್ಸ ಅರುಣಕುಮಾರ, ನಭಿಸಾಬ, ಪ್ರಕಾಶ ಕವಲಗಿ, ಸಿದ್ದಮ್ಮ ಬ್ಯಾಲ್ಯಾಳ, ಅನ್ನಪೂರ್ಣಾ ಹಿರೇಗೌಡಾ, ಹಾಗೂ ತಾಳಿಕೊಟೆ ಸಮೂದಾಯ ಆರೋಗ್ಯ ಕೇಂದ್ರದ ಆಡಳಿತ ವೈಧ್ಯಾಧಿಕಾರಿ ಡಾ.ಶ್ರೀಶೈಲ ಹುಕ್ಕೇರಿ, ಹಾಗೂ ಡಾ.ಎ.ಎ.ನಾಲಬಂದ, ಡಾ.ವಿಜಯಕುಮಾರ ಕಾರ್ಚಿ, ಡಾ.ಗುರು ಚಿತ್ತರಗಿ, ಶಶಿಗೌಡ ಕೇಸರಭಾವಿ, ಜೈಸಿಂಗ್ ಮೂಲಿಮನಿ, ರಾಘವೇಂದ್ರ ಮಾನೆ, ಲಂಕೇಶ ಪಾಟೀಲ, ಮೊದಲಾದವರು ಉಪಸ್ಥಿತರಿದ್ದರು.

# ಸಂವಹನ ಕೌಶಲ್ಯದಿಂದ ವೈದ್ಯಕೀಯ ವೃತ್ತಿಯಲ್ಲಿ ಏಳ್ಗೆ ಹೊಂದಲು ಸಾಧ್ಯ

**ಬೆಳಗಾವಿ ವಾರ್ತೆ ವಿಜಯಪುರ:** ಸರಿಯಾದ ಸಂವಹನ ಕೌಶಲ್ಯದಿಂದ ವೈದ್ಯಕೀಯ ವೃತ್ತಿಯಲ್ಲಿ ಏಳ್ಗೆ ಹೊಂದಲು ಸಾಧ್ಯ ಎಂದು ಹುಬ್ಬಳ್ಳಿಯ ಕರ್ನಾಟಕ ವೈದ್ಯಕೀಯ ಮಹಾವಿದ್ಯಾಲಯ ಮತ್ತು ಸಂಶೋಧನಾ ಸಂಸ್ಥೆಯ ವೈದ್ಯಕೀಯ ವಿಭಾಗದ ಪ್ರಾಧ್ಯಾಪಕ ಮತ್ತು ವೈದ್ಯಕೀಯ ಅಧ್ಯಯನ ವಿಭಾಗದ ಸಂಯೋಜಕ ಡಾ. ಸಂಜಯ ನೀರಲಗಿ ಹೇಳಿದ್ದಾರೆ.

ಶನಿವಾರ ನಗರದ ಬಿ.ಎಲ್.ಡಿ.ಇ ಡೀಮ್ಡ್ ವಿಶ್ವವಿದ್ಯಾಲಯದ ಶ್ರೀ ಬಿ. ಎಂ. ಪಾಟೀಲ ವೈದ್ಯಕೀಯ ಮಹಾವಿದ್ಯಾಲಯದ ವೈದ್ಯಕೀಯ ಅಧ್ಯಯನ ವಿಭಾಗದ ವತಿಯಿಂದ ಆಯೋಜಿಸಲಾದ ವೈದ್ಯಕೀಯ ವೃತ್ತಿಯಲ್ಲಿ ಸಂಹವನ ಕೌಶಲ್ಯದ ಮಹತ್ವ ಕುರಿತು ಅವರು ಅತಿಥಿ ಉಪನ್ಯಾಸ ನೀಡಿದರು.

ಸಕ್ರಿಯವಾಗಿ ಆಲಿಸುವುದು, ಸ್ಪಷ್ಟವಾಗಿ ಮಾತನಾಡುವುದು, ಕರುಣೆ, ಸಹಾನುಭೂತಿ ತೋರಿಸುವುದು ಇಲ್ಲಿ ಮುಖ್ಯವಾಗಿವೆ. ಅಷ್ಟೇ ಅಲ್ಲ, ಸರಿಯಾದ ದೇಹಭಾಷೆಯಿಂದ ರೋಗಿಗಳ ಮತ್ತು ಸಂಬಂಧಿಕರ ಆತ್ಮವಿಶ್ವಾಸವನ್ನು ಗೆಲ್ಲಬಹುದು. ಸರಿಯಾದ ಸಂವಹನ ಕೌಶಲ್ಯದಿಂದ ತಪ್ಪು ತಿಳುವಳಿಕೆಯನ್ನು ಹೋಗಲಾಡಿಸಿ ಸಂಬಂಧಗಳನ್ನು ಬಲಪಡಿಸಲು ಮತ್ತು ವೈದ್ಯಕೀಯ ವೃತ್ತಿಯಲ್ಲಿ ಏಳ್ಗೆ ಹೊಂದಲು ಸಾಧ್ಯವಿದೆ ಎಂದು ಅವರು ಹೇಳಿದರು.

ಇದೇ ವೇಳೆ ಸ್ನಾತಕೋತ್ತರ ವಿದ್ಯಾರ್ಥಿಗಳಿಗೆ ಪ್ರಾಯೋಗಿಕ ತರಬೇತಿ ಮತ್ತು ಉದಾಹರಣೆಗಳೊಂದಿಗೆ ಅವರು ಪ್ರಾತ್ಯಕ್ಷಿಕವಾಗಿ ತಿಳಿಹೇಳಿದರು. ಅಲ್ಲದೇ, ರೋಗಿಗಳ ಪರಿಣಾಮಕಾರಿ ಚಿಕಿತ್ಸೆಯಲ್ಲಿ ವೈದ್ಯರ ಜ್ಞಾನ ಭಂಡಾರ, ವೃತ್ತಿ ನೈಪುಣ್ಯತೆ ಜೊತೆಗೆ ಸಂವಹನ ಕೌಶಲ್ಯತೆಯೂ ಪ್ರಾಮುಖ್ಯತೆ ಹೊಂದಿದೆ ಎಂದು ಅವರು ಹೇಳಿದರು.

ಶಸ್ತ್ರಚಿಕಿತ್ಸೆ ವಿಭಾಗದ ಮುಖ್ಯಸ್ಥ ಡಾ. ಮಂಜುನಾಥ ಕೋಟೆಣ್ಣವರ



ಮಾತನಾಡಿ, ಔಷಧಿಯಿಂದ ಗುಣಪಡಿಸಲಾಗದ ಕಾಯಿಲೆಗಳಿಗೆ ವೈದ್ಯರ ಸಹಾನುಭೂತಿಯ ಸಮಾ ಲೋಚನೆಯಿಂದ ರೋಗಿ ಮತ್ತು ರೋಗಿಗಳ ಸಂಬಂಧಿಕರನ್ನು ತೃಪ್ತಿ ಪಡಿಸಬಹುದು ಮತ್ತು ವೈದ್ಯೋನಾ ರಾಯಣೋ ಹರಿ ಎಂಬ ಉಕ್ತಿಯಂತೆ ರೋಗಿಗಳು ವೈದ್ಯರಲ್ಲಿ ವಿಶ್ವಾಸ ಹೊಂ ದಲು ಸಂವಹನ ಕೌಶಲ್ಯ ತುಂಬಾ ಸಹಾಯಕಾರಿಯಾಗಿದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಪ್ರಾಚಾರ್ಯೆ ಡಾ. ತೇಜಸ್ವಿನಿ ವಲ್ಲಭ, ವೈದ್ಯಕೀಯ ನಿರ್ದೇಶಕ ಡಾ. ವಿಜಯಕುಮಾರ ಕಲ್ಯಾಣಪ್ಪಗೋಳ, ಉಪಪ್ರಾಚಾರ್ಯ ಡಾ. ಆನಂದ ಅಂಬಲಿ, ರೋಗ ನಿದಾನಶಾಸ್ತ್ರ ವಿಭಾಗದ ಮುಖ್ಯಸ್ಥೆ ಡಾ. ಸುರೇಖಾ ಹಿಪ್ಪರಗಿ, ಪ್ರಾಧ್ಯಾಪಕರಾದ ಡಾ.ವಿಜಯಾ ಪಾಟೀಲ, ಡಾ. ರೇಖಾ ಬಿರಾದಾರ, ಡಾ. ಶ್ರವಣಕುಮಾರ ಉಪಸ್ಥಿತರಿದ್ದರು.

ವೈದ್ಯಕೀಯ ಅಧ್ಯಯನ ವಿಭಾಗದ ಸಂಯೋಜಕ ಮತ್ತು ಸಮುದಾಯ ಆರೋಗ್ಯ ವಿಭಾಗದ ಪ್ರಾಧ್ಯಾಪಕರಾದ ಡಾ. ಪ್ರವೀಣ ಗಂಗನಹಳ್ಳಿ ಸ್ವಾಗತ, ಪರಿಚಯ ಮಾಡಿ ವಂದಿಸಿದರು.

ಈ ಕಾರ್ಯಕ್ರಮದಲ್ಲಿ ಸುಮಾರು 80 ಸ್ನಾತಕೋತ್ತರ ವೈದ್ಯಕೀಯ ವಿದ್ಯಾರ್ಥಿಗಳು ಭಾಗವಹಿಸಿದ್ದರು.

# ಜೂನ್ 11ರಿಂದ 13 ರವರೆಗೆ ಬಳ್ಳಾರಿಯಲ್ಲಿ ಶ್ರೀ ಚರಂತಪ್ಪಜ್ಜ ಮಹಾಸ್ವಾಮಿಗಳ 22ನೇ ಪುಣ್ಯಸ್ಮರಣೋತ್ಸವ




**ಬೆಳಗಾವಿ ವಾರ್ತೆ ಬಳ್ಳಾರಿ:** ವಿಜಯನಗರ ಜಿಲ್ಲೆಯ ಗದ್ದಿಕೆರೆಯ ಮಹಾಮಹಿಮ ಗುರು ಹಾಗೂ ಕಲಿಯುಗದ ಕಾಮಧೇನು ಎಂದೇ ಖ್ಯಾತರಾಗಿದ್ದ ಶ್ರೀ ಚರಂತಪ್ಪಜ್ಜ ಮಹಾಸ್ವಾಮಿಗಳ 22ನೇ ಪುಣ್ಯಸ್ಮರಣೋತ್ಸವ ಕಾರ್ಯಕ್ರಮವು ಜೂನ್ 11ರಿಂದ 13ರವರೆಗೆ ನಗರದ ಪಾರ್ವತಿನಗರದ ಬಸವಭವನದಲ್ಲಿ ವಿವಿಧ ಧಾರ್ಮಿಕ, ಸಾಂಸ್ಕೃತಿಕ ಹಾಗೂ ಸಾಮಾಜಿಕ ಸೇವಾ ಕಾರ್ಯಕ್ರಮಗಳೊಂದಿಗೆ ನಡೆಯಲಿದೆ.

ನಗರದ ಪತ್ರಿಕಾ ಭವನದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಕಾರ್ಯಕ್ರಮದ ವಿವರ ನೀಡಿದ ಸಿದ್ದರಾಮ ಕಲ್ಮಟ್ ಹಾಗೂ ಡಾ. ಮಹೇಶ್ವರಸ್ವಾಮಿ, ಪುಣ್ಯಸ್ಮರಣೋ ತ್ಸವದ ಅಂಗವಾಗಿ ಗುರುಚರಂತಾರ್ಯ ಶ್ರೀ ಪ್ರಶಸ್ತಿ ಪ್ರದಾನ, ವಿವಿಧ ಗ್ರಂಥಗಳ ಲೋಕಾರ್ಪಣೆ, ಗ್ರಂಥ ಪ್ರದರ್ಶನ, ಉಚಿತ ಕಣ್ಣಿನ ತಪಾಸಣೆ ಹಾಗೂ ಚಿಕಿತ್ಸಾ ಶಿಬಿರ, ರಕ್ತದಾನ ಶಿಬಿರ, ಹೃದಯ ಮತ್ತು ಎಲುಬು-ಕೀಲು ತಪಾಸಣೆ ಶಿಬಿರ, ಯೋಗ ಥೆರಪಿ ಹಾಗೂ ಸಂಗೀತ-ಸಾಂಸ್ಕೃತಿಕ ಕಾರ್ಯ ಕ್ರಮಗಳು ನಡೆಯಲಿವೆ ಎಂದು ತಿಳಿಸಿದರು.

ಜೂನ್ 11ರಂದು ಅಕ್ಕನ ಬಳಗದಿಂದ ಶ್ರೀ ಸಿದ್ಧಾಂತ ಶಿಖಾಮಣಿ ಹಾಗೂ ಲಲಿತಾ ಸಹಸ್ರನಾಮ ಪಾರಾಯಣ, ಪುಸ್ತಕ ಪ್ರದರ್ಶನ, ಯೋಗ ಥೆರಪಿ ಹಾಗೂ "ಶ್ರೀಗುರು ದೊಡ್ಡಬಸವೇಶ್ವರ ಸ್ವಾಮಿಯ ಶತನಾಮಾವಳಿ" ಗ್ರಂಥ ಲೋಕಾರ್ಪಣೆ ನಡೆಯಲಿದೆ. ಮಹಿಳಾ ಸಬಲೀಕರಣ ಕುರಿತು ಡಾ. ರಾಜಶ್ರೀ ಪಾಟೀಲ್ ಉಪನ್ಯಾಸ ನೀಡಲಿದ್ದು, ಮಹಾದೇವಯ್ಯ ಸ್ವಾಮಿಗಳ ಪ್ರವಚನ ಹಾಗೂ ಶರಣಯ್ಯ ಗವಾಯಿಗಳಿಂದ ಭಕ್ತಿಗೀತೆಗಳ ಗಾಯನ ನಡೆಯಲಿದೆ.

ಜೂನ್ 12ರಂದು "ವಚನಾನುಸಂಧಾನ" ಗ್ರಂಥ ಲೋಕಾರ್ಪಣೆ ಸಮಾರಂಭ ನಡೆಯಲಿದ್ದು, ಸಂಡೂರು ವಿರಕ್ತಮಠದ ಪ್ರಭುಸ್ವಾಮಿಗಳು ದಿವ್ಯ ಸಾನ್ನಿಧ್ಯ ವಹಿಸಲಿದ್ದಾರೆ. ಸಂಶೋಧಕ ಡಾ. ಸಿ. ಶಿವಕುಮಾರ ಸ್ವಾಮಿ ಗ್ರಂಥವನ್ನು ಲೋಕಾರ್ಪಣೆ ಮಾಡಲಿದ್ದು, ಅಮಾತಿ ಬಸವರಾಜ್ ವಿಶೇಷ ಉಪನ್ಯಾಸ ನೀಡಲಿದ್ದಾರೆ.

ಜೂನ್ 13ರಂದು "ದಿವ್ಯಪ್ರಕಾಶ" ಗ್ರಂಥ ಲೋಕಾರ್ಪಣೆ ಹಾಗೂ ಗುರುಚರಂತಾರ್ಯ ಶ್ರೀ ಪ್ರಶಸ್ತಿ ಪ್ರದಾನ ಸಮಾರಂಭ ನಡೆಯಲಿದೆ. ವಿವಿಧ ಕ್ಷೇತ್ರಗಳಲ್ಲಿ ಸಾಧನೆಗೈದ ವೈದ್ಯರು, ಕಲಾವಿದರು ಹಾಗೂ ಸಮಾಜಸೇವಕರಿಗೆ ಪ್ರಶಸ್ತಿ ನೀಡಿ ಗೌರವಿಸಲಾಗುವುದು.

ಕಾರ್ಯಕ್ರಮದಲ್ಲಿ ಮಾಜಿ ಶಾಸಕ ನಾರಾ ಸೂರ್ಯನಾರಾಯಣರೆಡ್ಡಿ, ಶಾಸಕ ನಾರಾ ಭರತ್ ರೆಡ್ಡಿ, ಮೇಯರ್ ಪಿ. ಗಾದೆಪ್ಪ, ಮಾಜಿ ಶಾಸಕ ಜಿ. ಸೋಮಶೇಖರ ರೆಡ್ಡಿ, ಕಾಂಗ್ರೆಸ್ ಜಿಲ್ಲಾಧ್ಯಕ್ಷ ಅಲ್ಲಂ ಪ್ರಶಾಂತ್ ಸೇರಿದಂತೆ ಹಲವು ಗಣ್ಯರು ಭಾಗವಹಿಸಲಿದ್ದಾರೆ ಎಂದು ಸಂಘಟಕರು ತಿಳಿಸಿದ್ದಾರೆ.

# ಜೂನ್ 12ರ ಬಾಲಕಾರ್ಮಿಕ ವಿರೋಧಿ ಜಾಗೃತಿ ಕಾರ್ಯಕ್ರಮ ಯಶಸ್ವಿಗೊಳಿಸಿ



**ಬೆಳಗಾವಿ ವಾರ್ತೆ ಹೂಸಪೇಟೆ:** ಮಕ್ಕಳ ಸುಂದರ ಬಾಲ್ಯವನ್ನು ಕಸಿದುಕೊಳ್ಳುತ್ತಿರುವ ಬಾಲಕಾರ್ಮಿಕ ಪದ್ಧತಿಯನ್ನು ಸಂಪೂರ್ಣವಾಗಿ ಬೇರುಸಹಿತ ಕಿತ್ತೆಸೆಯಲು ಜಿಲ್ಲಾ ಹಾಗೂ ತಾಲೂಕು ಆಡಳಿತಗಳು ಸಕ್ರಿಯವಾಗಿ ಕಾರ್ಯನಿರ್ವಹಿಸಬೇಕು. ಮುಂಬರುವ ಜೂನ್ 12 ರ ವಿಶ್ವ ಬಾಲಕಾರ್ಮಿಕ ಪದ್ಧತಿ ವಿರೋಧಿ ದಿನಾಚರಣೆಯನ್ನು ಕೇವಲ ಸಾಂಪ್ರದಾಯಿಕ ಕಾರ್ಯಕ್ರಮವಾಗಿಸದೆ, ಜಿಲ್ಲಾ, ತಾಲ್ಲೂಕು ಮತ್ತು ಗ್ರಾಮೀಣ ಭಾಗದಲ್ಲಿ ಜಾಗೃತಿ ಮೂಡಿಸಬೇಕು. ಅದರಂತೆ ಅರ್ಥಪೂರ್ಣ ಹಾಗೂ ಯಶಸ್ವೀ ಕಾರ್ಯಕ್ರಮಕ್ಕೆ ಅಧಿಕಾರಿಗಳು ಸಹಕರಿಸಬೇಕು ಎಂದು ಜಿಲ್ಲಾಧಿಕಾರಿ ಕವಿತಾ ಎಸ್. ಮನ್ನಿಕೇರಿ ಸೂಚಿಸಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಸೋಮವಾರ ಬಾಲಕಾರ್ಮಿಕ ವಿರೋಧಿ ದಿನಾಚರಣೆ ಅಂಗವಾಗಿ ಆಯೋಜಿಸಲಾಗಿದ್ದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಕಾರ್ಯಕ್ರಮ ಕೇವಲ ಸಾಂಕೇತಿಕವಾಗಿ ಆಯೋಜಿಸದೆ ನುರಿತ ವಿಶೇಷ ಸಂಪನ್ಮೂಲ ವ್ಯಕ್ತಿಗಳ ಕರೆಸಿ ಮಕ್ಕಳಿಗೆ ಬಾಲ ಕಾರ್ಮಿಕ ಪದ್ಧತಿ ಕುರಿತು ವಿಶೇಷ ಉಪನ್ಯಾಸ ಆಯೋಜಿಸಬೇಕು. ಶಾಲಾ ಮಕ್ಕಳಿಂದ 10 ನಿಮಿಷಗಳ ಬಾಲಕಾರ್ಮಿಕ ಜಾಗೃತಿ ನಾಟಕ ಪ್ರದರ್ಶನ ಏರ್ಪಡಿಸುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ನಿರ್ದೇಶಿಸಿದ ಅವರು, ವಿದ್ಯಾರ್ಥಿ ನಿಲಯ, ಶಾಲಾ ಕಾಲೇಜುಗಳಿಗೆ ನಿರಂತರವಾಗಿ ಭೇಟಿ ನೀಡಿ ಹೆಚ್ಚಿನ ಜಾಗೃತಿ ಮೂಡಿಸಬೇಕಿದೆ ಎಂದರು. ಜಿಲ್ಲಾ ಮತ್ತು ತಾಲೂಕು ಮಟ್ಟದ ಟಾಸ್ಕ್ ಫೋರ್ಸ್ ಸಮಿತಿ ಅಥವಾ ವಿವಿಧ ಇಲಾಖೆ ಅಧಿಕಾರಿಗಳ ಜೊತೆ ಹೋಟೆಲ್, ಗ್ಯಾರೇಜ್, ಬೇಕರಿ ಹಾಗೂ ಇಟ್ಟಿಗೆ ಭಟ್ಟಿಗಳನ್ನು ಗುರಿಯಾಗಿಸಿಕೊಂಡು ನಿರಂತರ ಜಂಟಿ ದಾಳಿ ನಡೆಸಲು ಸೂಚನೆ ನೀಡಿದರು. ಇದಕ್ಕೆ ಸಂಬಂಧಪಟ್ಟ ಅಧಿಕಾರಿಗಳು ಪ್ರತಿಕ್ರಿಯಿಸಿ ಈಗಾಗಲೇ ಇಲಾಖೆ ವತಿಯಿಂದ ಜಿಲ್ಲೆಯ ಪ್ರಮುಖ ವಾಣಿಜ್ಯ ಮಳಿಗೆಗಳು ಹಾಗೂ ಉದ್ದಿಮೆಗಳಲ್ಲಿ ಕರಪತ್ರ ಮತ್ತು ಪೋಸ್ಟರ್‌ಗಳನ್ನು ಅಂಟಿಸಿದ್ದು, ಮಾಲೀಕರಿಂದ ನಾವು ಯಾವುದೇ ಕಾರಣಕ್ಕೂ ಮಕ್ಕಳನ್ನು ಕೆಲಸಕ್ಕೆ ಇಟ್ಟುಕೊಳ್ಳುವುದಿಲ್ಲ ಎಂಬ ಲಿಖಿತ ಮುಚ್ಚಳಿಕೆ ಪತ್ರ ಪಡೆಯುವ ಪ್ರಕ್ರಿಯೆ ನಡೆಸಲಾಗುತ್ತಿದ್ದು, ಈ ಕಾರ್ಯಕ್ಕೆ ಮತ್ತಷ್ಟು ಚುರುಕುಗೊಳಿಸಿದೆ. ಸಾರ್ವಜನಿಕರೂ ಕೂಡ ತಮ್ಮ ಆಸುಪಾಸಿನಲ್ಲಿ ಮಕ್ಕಳ ಶೋಷಣೆ ಕಂಡುಬಂದಲ್ಲಿ ತಕ್ಷಣ ಮಕ್ಕಳ ಸಹಾಯವಾಣಿ 1098 ಗೆ ಕರೆ ಮಾಡಿ ಮಾಹಿತಿ ನೀಡುವಂತೆ ಮನವಿ ಮಾಡಿದರು.

**ದಿನಾಚರಣೆ ಅಂಗವಾಗಿ ಬೃಹತ್ ಜಾಥಾ :** ಸಾರ್ವಜನಿಕರಲ್ಲಿ ಬಾಲಕಾರ್ಮಿಕ ಪದ್ಧತಿಯ ವಿರುದ್ಧ ಜಾಗೃತಿ ಮೂಡಿಸಲು ಜೂನ್ 12 ರಂದು ಬೆಳಿಗ್ಗೆ 9 ಗಂಟೆಗೆ ನಗರದ ಅಂಬೇಡ್ಕರ್ ವೃತ್ತದಲ್ಲಿ ಬೃಹತ್ ಜಾಥಾ ಕಾರ್ಯಕ್ರಮ ಆಯೋಜಿಸಲಾಗಿದೆ. ಜಾಥವು ನಗರದ ಅಂಬೇಡ್ಕರ್ ವೃತ್ತದಲ್ಲಿ ಆರಂಭವಾಗಿ ಪುಣ್ಯಮೂರ್ತಿ ವೃತ್ತ, ಅಪ್ಪು ವೃತ್ತ, ಬಸ್ ನಿಲ್ದಾಣ, ನಗರಸಭೆ ರಸ್ತೆ ಹಾಗೂ ವಿಜಯನಗರ ಕಾಲೇಜು ರಸ್ತೆಯ ಮೂಲಕ ಸಂಚರಿಸಿ ಜಿಲ್ಲಾ ಕ್ರೀಡಾಂಗಣದಲ್ಲಿ ಮುಕ್ತಾಯಗೊಳ್ಳಲಿದೆ. ನಂತರ ಬೆಳಗ್ಗೆ 10ಗಂಟೆಗೆ ಜಿಲ್ಲಾ ಒಳಾಂಗಣ ಕ್ರೀಡಾಂಗಣದಲ್ಲಿ ವೇದಿಕೆ ಕಾರ್ಯಕ್ರಮ ನಡೆಯಲಿದೆ. ಸಭೆಯಲ್ಲಿ ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಮಂಜುನಾಥ, ಜಿಲ್ಲಾ ಕಾರ್ಮಿಕ ಅಧಿಕಾರಿ ಸೂರಪ್ಪ ಡೊಂಬರ ಮತ್ತೂರು, ಕಾರ್ಮಿಕ ನಿರೀಕ್ಷಕ ಶಿವಶಂಕರ್, ಕಾರ್ಮಿಕ ಇಲಾಖೆ ಯೋಜನಾ ನಿರ್ದೇಶಕ ಮೌನೇಶ್ ಸೇರಿದಂತೆ ವಿವಿಧ ಇಲಾಖೆ ಅಧಿಕಾರಿಗಳು ಇದ್ದರು.

# ಎಲ್‌ಎಲ್ಸಿ ಕಾಲುವೆ ಬಳಿ ಯುವಕನ ಕೊಲೆ: ಮೃತದೇಹಕ್ಕೆ ಬೆಂಕಿ ಹಚ್ಚಿ ಸಾಕ್ಷ್ಯ ನಾಶಕ್ಕೆ ಯತ್ನ



**ಬೆಳಗಾವಿ ವಾರ್ತೆ ಬಳ್ಳಾರಿ:** ಬಳ್ಳಾರಿ ತಾಲೂಕಿನ ಎಲ್‌ಎಲ್ಸಿ (LLC) ಕಾಲುವೆ ಸಮೀಪ ಯುವಕನನ್ನು ಹತ್ಯೆಗೈದು, ಸಾಕ್ಷ್ಯ ನಾಶಪಡಿಸುವ ಉದ್ದೇಶದಿಂದ ಮೃತದೇಹವನ್ನು ಸುಮಾರು 13 ಕಿಲೋಮೀಟರ್ ದೂರಕ್ಕೆ ಕೊಂಡೊಯ್ದು ಪೆಟ್ರೋಲ್ ಸುರಿದು ಬೆಂಕಿ ಹಚ್ಚಿರುವ ಭೀಕರ ಘಟನೆ ಬೆಳಕಿಗೆ ಬಂದಿದೆ. ಪ್ರಾಥಮಿಕ ತನಿಖೆಯ ಪ್ರಕಾರ, ಈ ಹತ್ಯೆ ಪ್ರೇಮ ಸಂಬಂಧಿತ ವಿಚಾರಕ್ಕೆ ಸಂಬಂಧಿಸಿರಬಹುದೆಂಬ ಶಂಕೆ ವ್ಯಕ್ತವಾಗಿದೆ.

ಮೃತ ಯುವಕನನ್ನು ಆಂಧ್ರ ಪ್ರದೇಶದ ಅನಂತಪುರ ಜಿಲ್ಲೆಯ ಬೊಲ್ಲನಗುಡ್ಡಂ ನಿವಾಸಿ ಬಸವನಗೌಡ (27) ಎಂದು ಗುರುತಿಸಲಾಗಿದೆ. ಅವರು ಬಳ್ಳಾರಿಯ ಖಾಸಗಿ ಡಯಾಗ್ನೋಸ್ಟಿಕ್ ಕೇಂದ್ರವೊಂದರಲ್ಲಿ ಟೆಕ್ನಿಷಿಯನ್ ಆಗಿ ಕಾರ್ಯನಿರ್ವಹಿಸುತ್ತಿದ್ದರು ಎಂದು ತಿಳಿದುಬಂದಿದೆ.

ದುಷ್ಕರ್ಮಿಗಳು ಪೂರ್ವಯೋಜಿತವಾಗಿ ಹತ್ಯೆ ನಡೆಸಿ, ಮೃತದೇಹಕ್ಕೆ ಬೆಂಕಿ ಹಚ್ಚಿ ಗುರುತು ಸಿಗದಂತೆ ಮಾಡಲು ಯತ್ನಿಸಿದ್ದರು. ಆದರೆ ಶನಿವಾರ ಸುರಿದ ಮಳೆಯಿಂದ ಬೆಂಕಿ ಸಂಪೂರ್ಣವಾಗಿ ವ್ಯಾಪಿಸದೆ, ಶವವು ಅರ್ಧಂಬರ್ಧ ಸುಟ್ಟ ಸ್ಥಿತಿಯಲ್ಲಿ ಪತ್ತೆಯಾಗಿದೆ. ಇದರಿಂದ ಪ್ರಕರಣ ಬೆಳಕಿಗೆ ಬಂದಿದೆ.

ಎಲ್‌ಎಲ್ಸಿ ಕಾಲುವೆ ಬಳಿ ಕಾರ್ಯನಿರ್ವಹಿಸುತ್ತಿದ್ದ ಸಿಬ್ಬಂದಿ ಅರ್ಧ ಸುಟ್ಟು ಕರಕಲಾಗಿದ್ದ ಮೃತದೇಹವನ್ನು ಗಮನಿಸಿ ಮೋಕಾ ಪೊಲೀಸರಿಗೆ ಮಾಹಿತಿ ನೀಡಿದ್ದಾರೆ. ಸ್ಥಳಕ್ಕೆ ಧಾವಿಸಿದ ಪೊಲೀಸರು ಪರಿಶೀಲನೆ ನಡೆಸಿದ ವೇಳೆ, ಮೃತದೇಹ ಪತ್ತೆಯಾದ ಸ್ಥಳದಿಂದ ಸುಮಾರು 13 ಕಿಲೋಮೀಟರ್ ದೂರದಲ್ಲಿ ಮೃತ ಬಸವನಗೌಡ ಅವರಿಗೆ ಸೇರಿದ ಪಲ್ಸರ್ ಬೈಕ್ ಹಾಗೂ ಚಪ್ಪಲಿಗಳು ಪತ್ತೆಯಾಗಿವೆ.

ಘಟನಾ ಸ್ಥಳದಲ್ಲಿ ದೊರೆತಿರುವ ಸುಳಿವುಗಳು ಹಾಗೂ ಹತ್ಯೆ ನಡೆದಿರುವ ರೀತಿ ಗಮನಿಸಿದರೆ, ಇದು ಪ್ರೀತಿ-ಪ್ರೇಮ ವಿಚಾರಕ್ಕೆ ಸಂಬಂಧಿಸಿದ ವೈಷಮ್ಯದ ಪರಿಣಾಮವಾಗಿರಬಹುದೆಂದು ಪೊಲೀಸರು ಶಂಕಿಸಿದ್ದಾರೆ. ಆದರೆ ನಿಖರ ಕಾರಣ ತನಿಖೆಯ ನಂತರವೇ ತಿಳಿದುಬರಬೇಕಿದೆ.

ಈ ಸಂಬಂಧ ಮೋಕಾ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಆರೋಪಿಗಳ ಪತ್ತೆ ಹಾಗೂ ಹತ್ಯೆಯ ಹಿಂದಿನ ಉದ್ದೇಶದ ಕುರಿತು ಪೊಲೀಸರು ತನಿಖೆ ಮುಂದುವರಿಸಿದ್ದಾರೆ. ಜಿಲ್ಲೆಯಾದ್ಯಂತ ಈ ಘಟನೆ ಆತಂಕ ಮತ್ತು ಚರ್ಚೆಗೆ ಕಾರಣವಾಗಿದೆ.

# ಸಮಗ್ರ ಪರಿಷ್ಕರಣೆ ಕಾರ್ಯ ಯಶಸ್ವಿಗೆ ಸಹಕಾರ ಅಗತ್ಯ



**ಬೆಳಗಾವಿ ವಾರ್ತೆ ಬೆಳಗಾವಿ:** ಮತದಾರರ ಪಟ್ಟಿಗಳ ವಿಶೇಷ ಸಮಗ್ರ ಪರಿಶೀಲನೆ ಪ್ರಕ್ರಿಯೆ ಎಲ್ಲ ರಾಜ್ಯಗಳಲ್ಲಿ ಪ್ರಾರಂಭವಾಗಿದ್ದು, ಜಿಲ್ಲೆಯಾದ್ಯಂತ ಜೂನ್ 30 ರಿಂದ ಅಕ್ಟೋಬರ್ 7 ರವರೆಗೆ ಜರುಗಲಿರುವ ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ ಕಾರ್ಯ ಯಶಸ್ವಿಯಾಗಲು ರಾಜಕೀಯ ಪಕ್ಷಗಳು, ಸಾರ್ವಜನಿಕರ ಸಹಕಾರ ಅತ್ಯಗತ್ಯವಾಗಿದೆ ಎಂದು ಜಿಲ್ಲಾ ಚುನಾವಣಾ ಅಧಿಕಾರಿಗಳಾಗಿರುವ ಜಿಲ್ಲಾಧಿಕಾರಿ ಮೊಹಮ್ಮದ್ ರೋಷನ್ ಅವರು ಹೇಳಿದರು.

ಸುವರ್ಣ ವಿಧಾನಸೌಧ ಕಾನ್ಫರೆನ್ಸ್ ಸಭಾಂಗಣದಲ್ಲಿ ಜರುಗಿದ ವಿವಿಧ ರಾಜಕೀಯ ಪಕ್ಷಗಳ ಮುಖಂಡರು ಹಾಗೂ ಮಾಧ್ಯಮ ಪ್ರತಿನಿಧಿಗಳೊಂದಗಿನ ಮತದಾರರ ಪಟ್ಟಿಗಳ ವಿಶೇಷ ಸಮಗ್ರ ಪರಿಷ್ಕರಣೆ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಿಲ್ಲೆಯಲ್ಲಿ ಮತದಾರರ ಪಟ್ಟಿಗಳ ವಿಶೇಷ ಸಮಗ್ರ ಪರಿಶೀಲನೆ ಪ್ರಕ್ರಿಯೆಗೆ ಪೂರ್ವ ಸಿದ್ಧತೆ ಮಾಡಿಕೊಳ್ಳಲಾಗಿದೆ. 2002ರಲ್ಲಿ ಜರುಗಿದ ಮತದಾರರ ಪಟ್ಟಿಗಳ ವಿಶೇಷ ಸಮಗ್ರ ಪರಿಶೀಲನೆಯ ಮತದಾರರ ಪಟ್ಟಿಯನ್ನು ಮೂಲವಾಗಿಟ್ಟುಕೊಂಡು ಅದರಲ್ಲಿನ ಬದಲಾವಣೆಗಳನ್ನು ಸೂಕ್ಷ ??ವಾಗಿ ಪರಿಶೀಲಿಸಲಾಗುತ್ತಿದೆ ಎಂದರು.

ಜಿಲ್ಲೆಯ 18 ವಿಧಾನ ಸಭಾ ಕ್ಷೇತ್ರಗಳ ಮತದಾರರ ಪಟ್ಟಿಯನ್ನು ಮ್ಯಾಪಿಂಗ್ ಮಾಡಲಾಗಿದ್ದು, 41,22,869 ಮತದಾರರ ಪೈಕಿ 38,22,990 ಮತದಾರರ ಮ್ಯಾಪಿಂಗ್ ಕಾರ್ಯ ಪೂರ್ಣಗೊಂಡಿದ್ದು ಮ್ಯಾಪಿಂಗ್ ಕಾರ್ಯದಲ್ಲಿ ಜಿಲ್ಲೆಯಲ್ಲಿ ಪ್ರತಿಶತ 93 ರಷ್ಟು ಪ್ರಗತಿ ಸಾಧಿಸಲಾಗಿದೆ ಎಂದು ತಿಳಿಸಿದರು.

ಚುನಾವಣೆಗಳಿಗೆ ಮತದಾರರ ಪಟ್ಟಿಯ ಸಮಗ್ರತೆಯನ್ನು ಕಾಪಾಡುವುದು ಮೂಲಭೂತ ಅವಶ್ಯಕತೆಯಾಗಿದೆ. ವೆ?ಗದ ನಗರೀಕರಣ, ಶಿಕ್ಷಣ ಮತ್ತು ಜೀವನೋಪಾಯಕ್ಕಾಗಿ ವಲಸೆ ಹೋಗುವುದು,

ರಾಜಕೀಯ ಪಕ್ಷಗಳು ಮತದಾರರ ಪಟ್ಟಿಯ ಗುಣಮಟ್ಟದ ಬಗ್ಗೆ ಕಳವಳ ವ್ಯಕ್ತಪಡಿಸುತ್ತಿರುವುದು ಹಾಗೂ ಮೃತಪಟ್ಟವರು, ಸ್ಥಳಾಂತರಗೊಂಡ ಮತದಾರರನ್ನು ಪಟ್ಟಿಯಿಂದ ತೆಗೆದುಹಾಕುವುದು ಮತದಾರರ ಪಟ್ಟಿ ವೀಶೇಷ ಸಮಗ್ರ ಪರಿಶೀಲನೆಯ ಉದ್ದೇಶವಾಗಿದೆ ಎಂದರು.

ಭೂತ ಮಟ್ಟದ ಅಧಿಕಾರಿಗಳು ಮನೆ ಮನೆಗೆ ಭೇಟಿ ನೀಡಿ ಎನ್ಯೂಮರೇಶನ್ ಅರ್ಜಿಗಳನ್ನು

ನೀಡಿ ಅವುಗಳನ್ನು ಸಂಗ್ರಹಿಸಲು ಕನಿಷ್ಠ ಮೂರು ಭಾರಿ ಭೇಟಿ ನೀಡುವರು. ಮತದಾರರು ತಮ್ಮ ವಿವರಗಳನ್ನು ಹಿಂದಿನ ಖಐಖ ಮತದಾರರ ಪಟ್ಟಿಯ ಆಧಾರದ ಮೇಲೆ ಭರ್ತಿ ಮಾಡಿ ಅರ್ಜಿ ಜೊತೆಗೆ ಕೇಳಲಾದಂತಹ ಯಾವುದಾದರೊಂದು ದಾಖಲೆಗಳನ್ನು ಲಗತ್ತಿಸಿ ಬಿ.ಎಲ್.ಓ ಗಳಿಗೆ ನೀಡಬೇಕು. ತದನಂತರ ಬಿ.ಎಲ್.ಓ ಗಳು ಅವುಗಳನ್ನು ಪರಿಶೀಲಿಸಿ ತಂತ್ರಾಂಶದಲ್ಲಿ ದಾಖಲಿಸಿರುತ್ತಾರೆ. ಅಗತ್ಯ ದಾಖಲೆಗಳಿಲ್ಲದೆ ಮತದಾರರ ಪಟ್ಟಿಯಲ್ಲಿನ ಹೆಸರುಗಳನ್ನು ತೆಗೆದು ಹಾಕಲು ಅವಕಾಶ ವಿರುವುದಿಲ್ಲ. ಮತದಾರರ ಪಟ್ಟಿಯಲ್ಲಿ ಹೊಸದಾಗಿ ಸೇರ್ಪಡೆ ಹೊಂದಲು ನಮೂನೆ 6 ನ್ನು ಸಲ್ಲಿಸಬೇಕು ಎಂದರು.

ದೇಶದ ಮೂಲ ನಿವಾಸಿಗಳು ಮತದಾನದಿಂದ ವಂಚಿತರಾಗಬಾರದು ಎನ್ನುವ ಉದ್ದೇಶದೊಂದಿಗೆ ಭಾರತ ಚುನಾವಣಾ ಆಯೋಗವು ಈ ಕಾರ್ಯಕ್ರಮವನ್ನು ಹಮ್ಮಿಕೊಂಡಿದ್ದು ಮತದಾರರ ಪಟ್ಟಿ ಸಮಗ್ರ ವಿಶೇಷ ಪರಿಷ್ಕರಣೆ ಯಶಸ್ವಿಗಾಗಿ ವಿವಿಧ ರಾಜಕೀಯ ಪಕ್ಷಗಲಕು ಹಾಗೂ ಸಾರ್ವಜನಿಕರ ಸಹಕಾರ ಅತಗತ್ಯವಾಗಿದೆ ಎಂದು ಜಿಲ್ಲಾ ಚುನಾವಣಾಧಿಕಾರಿಗಳು ಹಾಗೂ ಜಿಲ್ಲಾಧಿಕಾರಿಗಳಾದ ಮೊಹಮ್ಮದ್ ರೋಷನ್ ಅವರು ಹೇಳಿದರು.

ಕಾರ್ಯಕ್ರಮದ ಸಂಪನ್ಮೂಲ ವ್ಯಕ್ತಿಗಳಾಗಿ ಆಗಮಿಸಿದ್ದ ಮಹಾನಗರ ಪಾಲಿಕೆ ಉಪ ಆಯುಕ್ತರಾದ ಸಿದ್ದು ಹುಲ್ಲೋಳಿ ಅವರು ಮಾತನಾಡಿ ಜೂನ್ 20 ರಿಂದ ಜೂನ್ 29 ರವರೆಗೆ ಮತದಾರರ ಪಟ್ಟಿ ತಯಾರಿ, ತರಬೇತಿ ಮತ್ತು ಮುದ್ರಣ ಕಾರ್ಯಗಳನ್ನು ಕೈಗೊಳ್ಳಲಾಗುವುದು. ಬಿಎಲ್‌ಓಗಳು ಜೂನ್ 30 ರಿಂದ ಜುಲೈ 29 ರವರೆಗೆ ಮನೆ ಮನೆಗೆ ಭೇಟಿ ನೀಡುವರು. ಕರಡು ಮತದಾರರ ಪಟ್ಟಿಯನ್ನು ಆಗಸ್ಟ 5 ರಂದು ಪ್ರಕಟಿಸಲಾಗುವುದು. ಆಕ್ಷೇಪಣೆಗಳನ್ನು ಸಲ್ಲಿಸಲು ಆಗಸ್ಟ 5 ರಿಂದ ಸೆಪ್ಟೆಂಬರ್ 4 ರವರೆಗೆ ಕಾಲಾವಕಾಶ ನೀಡಲಾಗಿದೆ. ಆಕ್ಷೇಪಣೆಗಳ ವಿಲೇವಾರಿಯನ್ನು ಆಗಸ್ಟ 5 ರಿಂದ ಅಕ್ಟೋಬರ್ 3 ರವರೆಗೆ ಕೈಗೊಳ್ಳಲಾಗುತ್ತದೆ. ಅಂತಿಮ ಮತದಾರರ ಪಟ್ಟಿಯನ್ನು ಅಕ್ಟೋಬರ್ 7 ರಂದು ಪ್ರಕಟಣೆ ಮಾಡಲಾಗುವುದು ಎಂದು ತಿಳಿಸುವುದರ ಮೂಲಕ ಮತದಾರರ ಪಟ್ಟಿಗಳ ವಿಶೇಷ ಸಮಗ್ರ ಪರಿಶೀಲನೆಯ ವಿವಿಧ ಹಂತಗಳನ್ನು ಪ್ರಾತ್ಯಕ್ಷಿಕೆ ಮೂಲಕ ಸವಿವರವಾಗಿ ವಿವರಿಸಿದರು.

ತದನಂತರ ವಿವಿಧ ರಾಜಕೀಯ ಮುಖಂಡರುಗಳು ಹಾಗೂ ಮಾಧ್ಯಮ ಪ್ರತಿನಿಧಿಗಳೊಂದಿಗೆ ಜರುಗಿದ ಸಂವಾದದಲ್ಲಿ ಜಿಲ್ಲಾಧಿಕಾರಿಗಳಾದ ಮೊಹಮ್ಮದ್ ರೋಷನ್ ಅವರು ಸವಿವರವಾದ ಮಾಹಿತಿಯನ್ನು ನೀಡಿದರು.

ಕಾರ್ಯಾಗಾರದಲ್ಲಿ ಅಪರ ಜಿಲ್ಲಾಧಿಕಾರಿ ವಿಜಯಕುಮಾರ ಹೊನಕೇರಿ, ಪ್ರಶಿಕ್ಷಣಾರ್ಥಿ ಆಯ್.ಎ.ಎಸ್. ಅಧಿಕಾರಿ ರೋಹಿತ ಸಿಂಗ್, ವಿವಿಧ ರಾಜಕೀಯ ಪಕ್ಷಗಳ ಮುಖಂಡರು ಹಾಜರಿದ್ದರು.

# ನಿಧನ ವಾರ್ತೆ

**ಬೆಳಗಾವಿ ವಾರ್ತೆ**

**ಮೂಡಲಗಿ:** ತಾಲೂಕಿನ ಕಲ್ಲೋಳಿ ಪಟ್ಟಣದ ಮರಾಠ ಸಮಾಜದ ಹಿರಿಯರು ಮತ್ತು ಮಾಜಿ ಸೈನಿಕರಾದ ನಾಗಪ್ಪ ಯಲ್ಲಪ್ಪ.ಸಾಳೊಂಕಿ ( 97 ) ರವಿವಾರ ನಿಧನರಾದರು.

ಮೃತರು ಓರ್ವ ಪುತ್ರ, ಇಬ್ಬರು ಪುತ್ರಿಯರು ಸೇರಿದಂತೆ ಅಪಾರ ಬಂಧು ಬಳಗವನ್ನು ಅಗಲಿದ್ದಾರೆ.



ನಾಗಪ್ಪ ಸಾಳೊಂಕಿ

# ಮಾಜಿ ಸಚಿವ ಎಚ್.ಕೆ ಪಾಟೀಲರಿಗೆ ಸಚಿವ ಸ್ಥಾನ ನೀಡಲು ಒತ್ತಾಯಪೂರ್ವಕ ಮನವಿ

**ಬೆಳಗಾವಿ ವಾರ್ತೆ**

**ಗದಗ:** ರಾಜ್ಯದಲ್ಲಿ ಕಳೆದ ನಾಲ್ಕು ದಶಕಗಳಿಂದ ಶುದ್ಧ ರಾಜಕಾರಣದ ಮೂಲಕ ಜನಾನುರಾಗಿಯಾಗಿರುವ ರಾಜ್ಯದ ಹಿರಿಯ ರಾಜಕಾರಣಿ, ಅನುಭವಿ ಆಡಳಿತಗಾರ ಹಾಗೂ ಜನಪರ ನಾಯಕರಾದ ಮಾಜಿ ಸಚಿವರಾದ ಎಚ್.ಕೆ. ಪಾಟೀಲ ಅವರಿಗೆ ರಾಜ್ಯ ಸಚಿವ ಸಂಪುಟದಲ್ಲಿ ಸಂಪುಟದರ್ಜೆ ಸಚಿವ ಸ್ಥಾನ ನೀಡಬೇಕು. ಆ ಮೂಲಕ ಉತ್ತರ ಕರ್ನಾಟಕದ ಜನರ ಹಾಗೂ ಕಾಂಗ್ರೆಸ್ ಪಕ್ಷದ ಕಾರ್ಯಕರ್ತರು, ಮುಖಂಡರುಗಳ ಮನವಿಯನ್ನು ಪುರಸ್ಕರಿಸಬೇಕು ಎಂದು ಗದಗ ಜಿಲ್ಲಾ ಕಾಂಗ್ರೆಸ್ ಮುಖಂಡರಾದ ಮುನ್ನಾ ರೇಶ್ಮಿ ಅವರು ಒತ್ತಾಯಪೂರ್ವಕ ಮನವಿ ಮಾಡಿದ್ದಾರೆ.

ಈ ಕುರಿತು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಲೋಕಸಭೆ ಪ್ರತಿಪಕ್ಷದ ನಾಯಕರಾದ ರಾಹುಲ್ ಗಾಂಧಿ, ಹಿರಿಯರಾದ ಸೋನಿಯಾ ಗಾಂಧಿ, ರಾಜ್ಯ ಕಾಂಗ್ರೆಸ್ ಉಸ್ತುವಾರಿ ಸುರ್ಜೆವಾಲಾ ಅವರಿಗೆ ಸುಧೀರ್ಘ ಪತ್ರ ಪರೆದಿರುವ ಅವರು, ಉತ್ತರ ಕರ್ನಾಟಕಕ್ಕೆ ಮಾನ್ಯತೆ ನೀಡಲು ಮಾಜಿ ಸಚಿವರಾದ ಎಚ್.ಕೆ. ಪಾಟೀಲರಿಗೆ ಸಚಿವಸ್ಥಾನ ನೀಡುವುದು ಅತ್ಯಂತ ಅವಶ್ಯವಿದೆ ಎಂದು ವಿನಂತಿಸಿದ್ದಾರೆ.

ಗ್ರಾಮೀಣಾಭಿವೃದ್ಧಿ ಸಚಿವರಾದ ಅವಧಿಯಲ್ಲಿ ಸಲ್ಲಿಸಿದ ಸೇವೆಗೆ ಪ್ರಧಾನಮಂತ್ರಿಯವರಿಂದ ನಾಲ್ಕುಬಾರಿ ಪ್ರಶಸ್ತಿ ಪಡೆಯುವ ಮೂಲಕ ಮಾದರಿ ಆಡಳಿತಕ್ಕೆ ಕರ್ನಾಟಕವನ್ನು ದೇಶವೇ ಗಮನ ಸೆಳೆಯುವಂತೆ ಮಾಡಿದ್ದಾರೆ. ಗದಗ ಜಿಲ್ಲೆಯಲ್ಲಿ ಆರ್‌ಡಿಪಿಆರ್ ವಿವಿಯನ್ನು ಸ್ಥಾಪಿಸಿದ್ದಾರೆ. ಗದಗ ಜಿಲ್ಲೆಗೆ ಸರಕಾರ ನೀಡಿರುವ ಮೆಡಿಕಲ್ ಕಾಲೇಜ್ ರಾಜ್ಯದಲ್ಲಿಯೇ ಎತ್ತರದ ಸ್ಥಾನದಲ್ಲಿದೆ. ಸಹಕಾರ ಕ್ಷೇತ್ರದಲ್ಲಿನ ಅವರ ಸೇವೆ ಅನನ್ಯವಾಗಿದೆ. ಪ್ರಾಮಾಣಿಕತೆ, ಅಭಿವೃದ್ಧಿ ಪರ ಚಿಂತನೆ ಹಾಗೂ ಜನಸೇವೆಯ ಮೂಲಕ ವಿಶಿಷ್ಟ ಗುರುತನ್ನು ಮೂಡಿಸಿಕೊಂಡಿರುವ ಹಿರಿಯರು, ಮಾಜಿ ಸಚಿವರಾದ ಎಚ್.ಕೆ. ಪಾಟೀಲರು



ಅತ್ಯುತ್ತಮ ಕಾರ್ಯ ಮಾಡಿ, ಕಾಂಗ್ರೆಸ್ ಪಕ್ಷ ಇದುವರೆಗೆ ನೀಡಿರುವ ಯಾವುದೇ ಹುದ್ದೆ, ಸಚಿವಸ್ಥಾನದ ಘನತೆಯನ್ನು ಹೆಚ್ಚಿಸಿದ್ದಾರೆ.

ಗದಗ ಜಿಲ್ಲೆ ಸೇರಿದಂತೆ ಉತ್ತರ ಕರ್ನಾಟಕದ ಅಭಿವೃದ್ಧಿಗೆ ಅವರು ನೀಡಿರುವ ಕೊಡುಗೆ ಅಪಾರವಾಗಿದೆ. ಎಚ್.ಕೆ. ಪಾಟೀಲರಿಗೆ ಸಂಪುಟದರ್ಜೆ ಸಚಿವಸ್ಥಾನ ನೀಡಿದರೆ, ಅವರ ಅನುಭವ, ಆಡಳಿತ ಕೌಶಲ್ಯ ಮತ್ತು ಜನರ ಸಮಸ್ಯೆಗಳ ಬಗ್ಗೆ ಅವರಿಗೆ ಇರುವ ಕಾಳಜಿ ರಾಜ್ಯದ ಅಭಿವೃದ್ಧಿಗೆ ಮತ್ತಷ್ಟು ಸಹಕಾರಿಯಾಗಲಿದೆ ಎಂದು ಅವರು ತಿಳಿಸಿದ್ದಾರೆ.

ಉತ್ತರ ಕರ್ನಾಟಕದ ಅಭಿವೃದ್ಧಿ ಹಾಗೂ ಪಕ್ಷ ಸಂಘಟನೆಗಾಗಿ ದೀರ್ಘಕಾಲದಿಂದ ಸೇವೆ ಸಲ್ಲಿಸಿರುವ ಎಚ್.ಕೆ. ಪಾಟೀಲರಂತಹ ಹಿರಿಯ ನಾಯಕರಿಗೆ ಮೊದಲ ಹಂತದಲ್ಲಿಯೇ ಸಚಿವ ಸಂಪುಟದಲ್ಲಿ ಮೊದಲನೇ ಹಂತದಲ್ಲಿ ಸಚಿವ ಸ್ಥಾನ ನೀಡಬೇಕಿತ್ತು. ಪಕ್ಷದ ವರಿಷ್ಠರು ಹಾಗೂ ರಾಜ್ಯ ಸರ್ಕಾರವು ಉತ್ತರ ಕರ್ನಾಟಕದ ಜನರ ಭಾವನೆಗಳನ್ನು ಗಂಭೀರವಾಗಿ ಪರಿಗಣಿಸಿ ಸಚಿವ ಸಂಪುಟದಲ್ಲಿ ಎಚ್.ಕೆ. ಪಾಟೀರಿಗೆ ಸೂಕ್ತ ಸ್ಥಾನಮಾನ ನೀಡಬೇಕು. ಮುಂದಿನ ಹಂತದ ಸಚಿವ ಸಂಪುಟ ವಿಸ್ತರಣೆಯಲ್ಲಿ ಎಚ್.ಕೆ. ಪಾಟೀಲ ಅವರಿಗೆ ಸಂಪುಟದರ್ಜೆ ಸಚಿವ ಸ್ಥಾನ ನೀಡಬೇಕು ಎಂದು ಅವರು ಕಾಂಗ್ರೆಸ್ ವರಿಷ್ಠರಿಗೆ ಬರೆದಿರುವ ಪತ್ರದಲ್ಲಿ ವಿನಂತಿಸಿದ್ದಾರೆ.

# ಉಪನ್ಯಾಸ ಕಾರ್ಯಕ್ರಮ



**ಬೆಳಗಾವಿ ವಾರ್ತೆ ಹುಬ್ಬಳ್ಳಿ:** ಕನಕದಾಸ ಶಿಕ್ಷಣ ಸಮಿತಿಯ ಮಹಾವಿದ್ಯಾಲಯದ ಸಭಾಭವನದಲ್ಲಿ ಕರ್ನಾಟಕ ವಿದ್ಯಾವರ್ಧಕ ಸಂಘದ ಕಲಾ ಹಾಗೂ ಜಾನಪದ ಮಂಟಪ ಆಯೋಜಿಸಿದ್ದ ಉಪನ್ಯಾಸ ಕಾರ್ಯಕ್ರಮದಲ್ಲಿ ಕರ್ನಾಟಕ ವಿದ್ಯಾವರ್ಧಕ ಸಂಘದ ಕಾರ್ಯಕಾರಿ ಸಮಿತಿ ಸದಸ್ಯರಾದ ನ್ಯಾಯವಾದಿ ಶಿವಾನಂದ ಭಾವಿಕಟ್ಟಿ , ನಿವೃತ್ ಶಿಕ್ಷಕ ವೀರಣ್ಣ ಒಡ್ಡೀನ , ಪ್ರಾಚಾರ್ಯ ಡಾ ಮಹೇಶ್ ಧ. ಹೊರಕೇರಿ ಅವರನ್ನು ಶ್ರೇಯಾ ಜನ ಸೇವಾ ಫೌಂಡೇಷನ್ ವತಿಯಿಂದ ಗೌರವ ಪೂರ್ವಕವಾಗಿ ಸನ್ಮಾನಿಸಲಾಯಿತು. ಶ್ರೇಯಾ ಜನ ಸೇವಾ ಫೌಂಡೇಷನ್ ಅಧ್ಯಕ್ಷ ವೆಂಕನಗೌಡ ಜಿ. ಪಾಟೀಲ, ಹಿರಿಯರು, ಗಣ್ಯರಾದ ಶಾಂತಣ್ಣ ಕಡಿವಾಲ, ರವಿ ದಂಡಿನ, ಡಾ. ರಾಮು ಮೂಲಗಿ, ಗದಿಗೆಯ್ಯ ಹಿರೇಮಠ, ಪ್ರೊ ಎಸ್ ಎಂ ಸಾತ್ಮಾರ್, ಪ್ರೊ ಎಸ್ ಆರ್ ಆಶಿ , ಪ್ರೊ ಸಂದೀಪ ಬೂದಿಹಾಳ, ಬಸವರಾಜ ಸುಳ್ಳದ, ರಾಣಿಚನ್ನಮ್ಮ ಪರಿಸರ ಸೇವಾ ಸಮಿತಿಯ ಕಾರ್ಯದರ್ಶಿ, ಬಸವ ಪರಿಸರ ಸಂರಕ್ಷಣಾ ಸಮಿತಿಯ ಕಾರ್ಯದರ್ಶಿ, ಕರ್ನಾಟಕ ಜ್ಞಾನ ವಿಜ್ಞಾನ ಸಮಿತಿಯ ಜಿಲ್ಲಾ ಘಟಕದ ಉಪಾಧ್ಯಕ್ಷ, ಕರ್ನಾಟಕ ವಚನ ಸಾಹಿತ್ಯ ಪರಿಷತ್‌ನ ಜಿಲ್ಲಾ ಘಟಕದ ಕಾರ್ಯಾಧ್ಯಕ್ಷ, ಹೊರಕೇರಿ ಮಾಸ್ತರ ಶಿಕ್ಷಣ ಪ್ರತಿಷ್ಠಾನ ಟ್ರಸ್ಟಿ, ಗ್ರಂಥಪಾಲಕ ಡಾ. ಸುರೇಶ ಡಿ. ಹೊರಕೇರಿ, ಚನ್ನಬಸಪ್ಪ ಧಾರವಾಡಶೆಟ್ಟರ್ , ಮೃತ್ಯುಂಜಯ ಮಟ್ಟಿ , ಶಿವಾನಂದ ಬೆಂಗೇರಿ , ಎಂ ಪಿ ಕುಂಬಾರ , ಕಿರಣ , ಸೇರಿದಂತೆ ಮುಂತಾದವರು ಭಾಗವಹಿಸಿದ್ದರು.

# ಶಶಿಧರ ರೊಳ್ಳಿ ಕುಟುಂಬದವರಿಂದ ಕೊಪ್ಪಳ ಶ್ರೀಗಳ ಪಾದಪೂಜೆ



**ಬೆಳಗಾವಿ ವಾರ್ತೆ ಗದಗ :** ನಗರದ ದೇವರಾಜ ಅರಸು ಹಾಸ್ಟೇಲ್ ಆವರಣದಲ್ಲಿ ಶಶಿಧರ ರೊಳ್ಳಿ ಹಾಗೂ ಕುಟುಂಬದವರಿಂದ ಕೊಪ್ಪಳದ ಗವಿಸಿದ್ದೇಶ್ವರ ಶ್ರೀಗಳ ಪಾದಪೂಜೆ ಕಾರ್ಯಕ್ರಮ ಜರುಗಿತು. ಈ ಸಂದರ್ಭದಲ್ಲಿ ಡಾ. ಜಿ.ಬಿ.ಪಾಟೀಲ ಅವರು ಕಾರ್ಯಕ್ರಮ ನಿರೂಪಿಸಿ ದರು. ಎಸ್.ಜಿ.ಪಲ್ಲೇದ, ಬಿ.ಬಿ.ಬಾವಿಕಟ್ಟಿ, ಫಕೀರಪ್ಪ ಹೆಬಸೂರ, ಆರ್.ಡಿ. ಕಡ್ಲಿಕೊಪ್ಪ, ನೀಲಕಂಠ ಮರಡಿ, ವೈ.ಬಿ.ಬಾನಾಪೂರ, ಆರ್.ಎಂ. ನಿಂಬನಾಯ್ಕರ, ಎಸ್. ಡಿ.ಸಿಂಗಟಾಲಕೇರಿ, ಎಸ್.ಎಸ್.ಕರಡಿ ಸೇರಿದಂತೆ ಮುಂತಾದವರು ಉಪಸ್ಥಿತರಿದ್ದರು.

# ಸತೀಶ ಶುಗರ್ಸ ಕಾರ್ಖಾನೆಯಲ್ಲಿ ವಿಶ್ವ ಪರಿಸರ ದಿನಾಚರಣೆ

**ಬೆಳಗಾವಿ ವಾರ್ತೆ ಮೂಡಲಗಿ:** ತಾಲ್ಲೂಕಿನ ಹುಣಶ್ಯಾಳ ಪಿಜಿ ಬಳಿಯ ಸತೀಶ ಶುಗರ್ಸ ಕಾರ್ಖಾನೆ ಯ ಆವರಣದಲ್ಲಿ ವಿಶ್ವ ಪರಿಸರ ದಿನಾಚರಣೆಯ ಪ್ರಯುಕ್ತ ವನಮಹೋತ್ಸವ ಕಾರ್ಯಕ್ರಮ ಆಚರಿಸಲಾಯಿತು.

ಕಾರ್ಖಾನೆಯ ಚೇರಮನ್ ಮತ್ತು ಮುಖ್ಯ ಹಣಕಾಸಿನ ಅಧಿಕಾರಿ ಪ್ರದೀಪ ಕುಮಾರ ಇಂಡಿ ಅವರು ಸಸಿಗೆ ನೀರು ಉಣಿಸುವ ಮೂಲಕ ಚಾಲನೆ ನೀಡಿ ಮಾತನಾಡಿ, ಇಂದಿನ ದಿನಗಳಲ್ಲಿ ನಗರ ಮತ್ತು ಕೈಗಾರಿಕಾ ಪ್ರದೇಶಗಳ ಅಭಿವೃದ್ಧಿಗಾಗಿ ಅರಣ್ಯನಾಶ ಸೇರಿದಂತೆ ಇತರೇ ಮಾಲಿನ್ಯತೆಗಳಿಂದಾಗಿ ಪರಿಸರದ ಮೇಲೆ ಗಂಭೀರ ಪರಿಣಾಮ ಉಂಟಾಗುತ್ತಿದ್ದು, ಇದರಿಂದಾಗಿ ಜಾಗತಿಕ ತಾಪಮಾಣದ ಪ್ರಮಾಣದಲ್ಲಿ ಹೆಚ್ಚಳ ಕಂಡುಬರುತ್ತಿದೆ. ಇದೇ ರೀತಿ ನಿಸರ್ಗದ ಅವನತಿ ಮುಂದುವರೆದಲ್ಲಿ ಮುಂದೊಂದು ದಿನ ನಮ್ಮ ಮುಂದಿನ ಪೀಳಿಗೆಯು ಜೀವಜಲದ ಕೊರತೆ, ಬರಗಾಲದಂತಹ ಹಲವಾರು ತೊಂದರೆಗಳನ್ನು ಅನುಭವಿಸಬೇಕಾಗುತ್ತದೆ. ಆದ್ದರಿಂದ ವನಮಹೋತ್ಸವ ಕಾರ್ಯಕ್ರಮವು ಕೇವಲ ಒಂದು ದಿನದ ಆಚರಣೆಯಾಗದೇ ವ್ಯಕ್ತಿಯ ದಿನನಿತ್ಯದ ಜವಾಬ್ದಾರಿಯಾಗಬೇಕು. ಅಲ್ಲದೇ "ಏಕ ಪೇಡ ಮಾ ಕೆ ನಾಮ  ಒಂದು ಮರ ತಾಯಿಗಾಗಿ" ಎಂಬ ಭಾರತ ಸರಕಾರದ ರಾಷ್ಟ್ರವ್ಯಾಪ್ತಿ ಮರ ನೆಡುವ ಅಭಿಯಾನಕ್ಕೆ ದೇಶದ ಪ್ರಧಾನಿಗಳು ಕರೆಕೊಟ್ಟಿರುತ್ತಾರೆ. ಮಾತೃತ್ವವನ್ನು ಗೌರವಿಸುವುದರ ಜೊತೆಗೆ ಪರಿಸರವನ್ನು ರಕ್ಷಿಸುವುದು, ಹವಾಮಾನ ಬದಲಾವಣೆಯ ವಿರುದ್ಧ ಹೋರಾಡುವುದು ಮತ್ತು ಹಸಿರನ್ನು ಉತ್ತೇಜಿಸುವುದು ಈ ಅಭಿಯಾನದ ಉದ್ದೇಶವಾಗಿದೆ. ಈ ದಿಸೆಯಲ್ಲಿ ಪ್ರತಿಯೊಬ್ಬ ನಾಗರಿಕನು ಪ್ರತಿವರ್ಷ ಗಿಡಗಳನ್ನು ನೆಟ್ಟು ಪೋಷಿಸುವ ಮೂಲಕ ಪರಿಸರ ಸಂರಕ್ಷಣೆಯ ಜವಾಬ್ದಾರಿಯನ್ನು ನಿರ್ವಹಿಸಿಬೇಕು ಎಂದ ಅವರು ಪ್ರತಿವರ್ಷವೂ ನಮ್ಮ ಸಂಸ್ಥೆಯ ವಿವಿಧ ಘಟಕಗಳಲ್ಲಿ ಸಾವಿರಾರು ಗಿಡಗಳನ್ನು ನೆಡುವುದರ ಮೂಲಕ ಪರಿಸರವನ್ನು ಪೋಷಿಸುತ್ತಿರುವುದಾಗಿ ತಿಳಿಸಿದರು.

ಈ ಸಂದರ್ಭದಲ್ಲಿ ಸಂಸ್ಥೆಯ ಹಿರಿಯ ಉಪಾಧ್ಯಕ್ಷ ಪಿ.ಡಿ. ಹಿರೇಮಠ, ಉಪಾಧ್ಯಕ್ಷರುಗಳಾದ ವಿ. ಎಮ್. ತಳವಾರ, ಡಿ . ಆರ್. ಪವಾರ, ಪ್ರಧಾನ ವ್ಯವಸ್ಥಾಪಕರುಗಳಾದ ಎಮ್. ಬಿ. ಸಸಾಲಟ್ಟಿ, ಮಹೇಶ ಜಿ.ಆರ್. ಸಹಾಯಕ ಪ್ರಧಾನ ವ್ಯವಸ್ಥಾಪಕರುಗಳಾದ ಅರುಣ ಚೌಗಲಾ, ಮೃತ್ಯುಂಜಯ ಕನಕೇರಿ, ಸುರೇಶ ಭೋಸಲೆ, ವಿಜಯ ಕಟಾವಕರ ಹಾಗೂ ಹಿರಿಯ ಅಧಿಕಾರಿಗಳು ಮತ್ತು ಕಾರ್ಮಿಕರು ಉಪಸ್ಥಿತರಿದ್ದರು.



ಮೂಡಲಗಿ: ಹುಣಶ್ಯಾಳ ಪಿಜಿ ಬಳಿಯ ಸತೀಶ ಶುಗರ್ಸ ಕಾರ್ಖಾನೆಯ ಆವರಣದಲ್ಲಿ ಜರುಗಿದ ವನಮಹೋತ್ಸವಕ್ಕೆ ಕಾರ್ಖಾನೆಯ ಚೇರಮನ್ ಮತ್ತು ಮುಖ್ಯ ಹಣಕಾಸಿನ ಅಧಿಕಾರಿ ಪ್ರದೀಪಕುಮಾರ ಇಂಡಿ ಅವರು ಸಸಿಗೆ ನೀರು ಉಣಿಸುವ ಮೂಲಕ ಚಾಲನೆ ನೀಡಿದರು.

# ಅಥರ್ವ ಕಾಲೇಜಿನಲ್ಲಿ ಪೃಥ್ವಿ ಸಂಜೀವಿನಿ ಕಾರ್ಯಕ್ರಮಕ್ಕೆ ಚಾಲನೆ



ಮೂಡಲಗಿ: ನಾಗನೂರ ಅಥರ್ವ ಮಹಾವಿದ್ಯಾಲಯದಲ್ಲಿ ವಿಶ್ವ ಪರಿಸರ ದಿನಾಚರಣೆಯ ನಿಮಿತ್ಯವಾಗಿ ಆಯೋಜಿಸಿದ ಪೃಥ್ವಿ ಸಂಜೀವಿನಿ ಕಾರ್ಯಕ್ರಮಕ್ಕೆ ರಾಯಬಾಗ ವಲಯ ಅರಣ್ಯಾಧಿಕಾರಿ ಡಿ. ಶಿವಕುಮಾರ ಮತ್ತಿತರರು ಸಸಿ ನೆಟ್ಟು ಚಾಲನೆ ನೀಡಿದರು

**ಬೆಳಗಾವಿ ವಾರ್ತೆ ಮೂಡಲಗಿ:** ಸಾಧ್ಯವಿಲ್ಲ ಪ್ರಕೃತಿಯೊಂದಿಗೆ ಬದುಕು ಪರಿಸರವಿಲ್ಲದ ಬದುಕು ಕಲ್ಪನೆಗೂ ಬೆರೆತು ಹೋಗಿದೆ. ಪರಿಸರವನ್ನು ದೈವಸ್ಥಾನದಲ್ಲಿ ಇಟ್ಟು ಆರಾಧಿಸಿದ ಸಂಸ್ಕೃತಿ ನಮ್ಮದು. ಹೀಗಾಗಿ ಇದರ ರಕ್ಷಣೆಯ ಹೊಣೆಯೂ ನಮ್ಮದೆ ಆಗಿದೆ. ಎಂದು ರಾಯಬಾಗ ವಲಯ ಅರಣ್ಯಾಧಿಕಾರಿ ಡಿ. ಶಿವಕುಮಾರ ಹೇಳಿದರು.

ನಾಗನೂರ ಪಟ್ಟಣದ ಅಥರ್ವ ವಾಣಿಜ್ಯ ಹಾಗೂ ವಿಜ್ಞಾನ ಮಹಾವಿದ್ಯಾಲಯದಲ್ಲಿ ವಿಶ್ವ ಪರಿಸರ ದಿನಾಚರಣೆಯ ನಿಮಿತ್ಯವಾಗಿ ಆಯೋಜಿಸಿದ ಪೃಥ್ವಿ ಸಂಜೀವಿನಿ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದ ಅವರು ಆಧುನಿಕತೆ ವಿಕಾಸವಾದಂತೆ ಅದು ಪಕೃತಿಯ ಮೇಲೆ ವಿಷಮ ಪರಿಣಾಮ ಬೀರುತ್ತಿದೆ. ಇದರಿಂದ ಮಾನವ ಸೇರಿದಂತೆ ಇಡೀ ಜೀವ ಸಂಕುಲ ಅಪಾಯದ ಅಂಚಿನಲ್ಲಿದೆ. ಹೀಗಾಗಿ ಇನ್ನಾದರೂ ಅರಿತು ಪ್ರಕೃತಿಯ ಸಂರಕ್ಷಣೆ ಹಾಗೂ ಸಂವರ್ಧನೆಗೆ ಕಟಿಬದ್ಧರಾಗೋಣ ಎಂದು ಹೇಳಿದರು.

ಗುರುದೇವ ರವೀಂದ್ರನಾಥ ಫೌಂಡೇಶನ್ ಅಧ್ಯಕ್ಷ ಎ. ಆರ್. ಪಾಟೀಲ ಮಾತನಾಡಿ, ಜಾಗತಿಕ ತಾಪಮಾನ ವರ್ಷದಿಂದ ವರ್ಷಕ್ಕೆ ಹೆಚ್ಚಾಗುತ್ತಿದೆ. ಹವಾಮಾನ ವೈಪರಿತ್ಯಗಳು ಹಾಗೂ ಮಳೆ ಪ್ರಮಾಣದ ಏರಿಳಿತದಂತಹ ಸಮಸ್ಯೆಗಳಿಗೆ ನಮ್ಮ ಪರಿಸರದ ಮೇಲಿನ ನಿರ್ಲಕ್ಷವೆ ಕಾರಣ. ಮುಂದಿನ ದಿನಗಳಲ್ಲಿ ಮತ್ತಷ್ಟು ಸಸ್ಯ ಹಾಗೂ ಪ್ರಾಣಿ ಪ್ರಬೇಧಗಳ ಅವನತಿಗೆ ಕಾರಣವಾಗಲಿದೆ ಎಂದರು.

ಈ ಸಂದರ್ಭದಲ್ಲಿ ವಿದ್ಯಾರ್ಥಿಗಳೆಲ್ಲರೂ ಸೇರಿ ಮಹಾವಿದ್ಯಾಲಯದ ಆವರಣದಲ್ಲಿ ಸಸಿಗಳನ್ನು ನೆಟ್ಟರು. ಕಾರ್ಯಕ್ರಮದಲ್ಲಿ ಡಾ. ಪ್ರಸನ್ನಕುಮಾರ ಶಾಸ್ತ್ರೀಮಠ, ಪ್ರಾಸ್ತಾವಿಕವಾಗಿ ಮಾತನಾಡಿದರು.

ಸಂಸ್ಥೆಯ ಅಧ್ಯಕ್ಷ ವೆಂಕಟೇಶ ಜಂಬಗಿ ಅಧ್ಯಕ್ಷತೆ ವಹಿಸಿದ್ದರು. ನಿರ್ದೇಶಕರಾದ ಗಿರೀಶ ಗೋರಬಾಳ, ಡಾ. ಸಂತೋಷ ಮಿರ್ಜಿ, ಚೇತನ ಜೋಗನ್ನವರ, ಮುನ್ಯಾಳ ತಾ. ಪಂ ಮಾಜಿ ಸದಸ್ಯ ಆನಂದರಾವ್ ನಾಯ್ಕ ಉಪಸ್ಥಿತರಿದ್ದರು. ಪೂಜಾ ಮಾಡಲಗಿ ಸ್ವಾಗತಿಸಿದರು. ರಾಚಯ್ಯ ನಿರ್ವಾಣಿ ವಂದಿಸಿದರು. ಅನ್ನಪೂರ್ಣಾ ಪಾಶ್ಚಾಪೂರ ನಿರೂಪಿಸಿದರು.

BELAGAVI VARTE Kannada Daily morning news paper Editor, Printer, Publisher and Owned by MAHESHWARI BHIMASHI BHARAMANNAVAR, 221/1A/1A/1A MAHALINGESHWAR NAGAR, NEAR BCA HOSTEL BELAGAVI KARNATAKA 591307. Printed at RAJADHANI PRINTING PRESS, CTS NO.1720/B1, SHOP NO.2 KELKARBAG, BELAGAVI, KARNATAKA - 590001